ಸಂಪುಟ 01 । ಸಂಚಿಕೆ 108 । ಶುಕ್ರವಾರ 06 ಮಾರ್ಚ್ 2026 । ಪುಟ 4 । ಬೆಲೆ-2 ರೂ.

**ಇರ್ಫಾನ್ ಕೆ**
ಸಂಪಾದಕರು

**M A ವಹಾಬ್**
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ ಮಾನ್ವಿ, ಲಿಂಗಸೂರು, ರಾಯಚೂರ,ದೇವದುರ್ಗ ಬಳ್ಳಾರಿ, ಕೊಪ್ಪಳ ಯಾದಗಿರಿ, ಕಲಬುರ್ಗಿ, ಬೀದರ, ವಿಜಯಪುರ. ಗದಗ, ವಿಜಯನಗರ. ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

**1) ರಾಷ್ಟ್ರೀಯ ದಂತ ವೈದ್ಯರ ದಿನ**

ರಾಷ್ಟ್ರೀಯ ದಂತ ವೈದ್ಯರ ದಿನವನ್ನು (National Dentist's Day) ಪ್ರತಿ ವರ್ಷ ಮಾರ್ಚ್ 6 ರಂದು ಆಚರಿಸಲಾಗುತ್ತದೆ. ದಂತವೈದ್ಯರ ಸೇವೆ, ಹಲ್ಲಿನ ಆರೋಗ್ಯದ ಮಹತ್ವ, ಮತ್ತು ಬಾಯಿಯ ನೈರ್ಮಲ್ಯದ ಬಗ್ಗೆ ಜಾಗೃತಿ ಮೂಡಿಸಲು ಈ ದಿನವನ್ನು ಮೀಸಲಿಡಲಾಗಿದೆ. ದಂತವೈದ್ಯರ ಕೊಡುಗೆಯನ್ನು ಗೌರವಿಸಲು ಮತ್ತು ಉತ್ತಮ ದಂತ ಆರೋಗ್ಯವನ್ನು ಉತ್ತೇಜಿಸಲು ಈ ದಿನ ಸಹಕಾರಿಯಾಗಿದೆ.

**2) ಮಹಾದೇವ್ ಲಾಲ್ ಶ್ರಾಫ್ ಅವರ ಜನ್ಮ ದಿನ.**

ಭಾರತದ ಫಾರ್ಮಸಿ ಶಿಕ್ಷಣದ ಪಿತಾಮಹರಲ್ಲಿ ಒಬ್ಬರು. ಅವರು ದೇಶದಲ್ಲಿ ಫಾರ್ಮಸಿ ಶಿಕ್ಷಣವನ್ನು ಅಭಿವೃದ್ಧಿಪಡಿಸಲು ಮಹತ್ವದ ಪಾತ್ರ ವಹಿಸಿದರು.ಭಾರತದಲ್ಲಿ ``Father of Pharmacy Education'' ಎಂದು ಕರೆಯುತ್ತಾರೆ.

## ಸುಭಾಷಿತ

"ಬದುಕಿನಲ್ಲಿ ಬರುವ ಕಷ್ಟಗಳು ನಿನ್ನನ್ನು ಮುರಿಯಲು ಅಲ್ಲ, ಬದಲಿಗೆ ನಿನ್ನ ಶಕ್ತಿಯನ್ನು ಅರಿಯಲು."

ರವೀಂದ್ರನಾಥ ಟ್ಯಾಗೋರ್

## ಬಿಎಸ್ಎಫ್ ಗೆ ಯೋಧನಾಗಿ ಆಯ್ಕೆಯಾದ ಹಡಪದಗೆ ಸನ್ಮಾನ



**ನೈಜ್ಯ ದೆಸೆ ನ್ಯೂಸ್**

ತಾಳಿಕೋಟೆ: ತಾಲೂಕಿನ ಪೀರಾಪುರ ಗ್ರಾಮದ ಶ್ರೀಮತಿ ಮಹಾದೇವಿ ಮಾದೇವಪ್ಪ ಹಡಪದ ಇವರ ಮಗ ಅಮರೇಶ ಹಡಪದ ಬಿಎಸ್ಎಫ್ ಯೋಧನಾಗಿ ಆಯ್ಕೆಯಾದ ಹಿನ್ನಲೆಯಲ್ಲಿ ಇಂದು ಪಂಜಾಬ್ ರಾಜ್ಯದ ಹೊಶಿರ್ಪುರ್ ತರಬೇತಿ ಕೇಂದ್ರಕ್ಕೆ ತೆರಳುವ ಮುನ್ನ ಗ್ರಾಮಸ್ಥರಿಂದ ಸನ್ಮಾನಿಸಿ ಗೌರವಿಸಿ ಅವನ ಸೈನಿಕ ತರಬೇತಿಗೆ ಶುಭ ಹಾರೈಸಿಲಾಯಿತು.

# ಭಾರತಕ್ಕೆ ಅಗತ್ಯವಿರುವ ತೈಲ ಪೂರೈಸುವುದಾಗಿ ರಷ್ಯಾ ಭರವಸೆ



**ನವದೆಹಲಿ: ಕಳೆದ ಆರು ದಿನಗಳಿಂದ ಅಮೇ–ರಿಕಾ– ಇಸ್ರೇಲ್ ರಾಷ್ಟ್ರಗಳು ಇರಾನ್ ಮೇಲೆ ನಡೆಸುತ್ತಿರುವ ನಿರಂತರ ದಾಳಿಯಿಂದ ಪಶ್ಚಿಮ ಏಷ್ಯಾದಲ್ಲಿ ಉಲ್ಬಣಿಸಿರುವ ಉದ್ವಿಗ್ನತೆ ಯಿಂದಾಗಿ ಜಾಗತಿಕ ತೈಲ ಪೂರೈಕೆಯಲ್ಲಿ ವ್ಯತ್ಯಯ ಉಂಟಾದಲ್ಲಿ ಭಾರತಕ್ಕೆ ಅಗತ್ಯವಿರುವ ಇಂಧನವನ್ನು ಪೂರೈಸಲು ಸಿದ್ಧವಿರುವುದಾಗಿ ರಷ್ಯಾ ಘೋಷಿಸಿದೆ.**

ಹೊರ್ಮುಜ್ ಜಲಸಂಧಿಯ ಮೂಲಕ ನಡೆಯುವ ವ್ಯಾಪಾರಕ್ಕೆ ಅಡ್ಡಿಯಾಗಿರುವ ಹಿನ್ನೆಲೆಯಲ್ಲಿ ಈ ಪ್ರಸ್ತಾವನೆ ಮಹತ್ವ ಪಡೆದುಕೊಂಡಿದೆ.ಮೂಲಗಳ ಪ್ರಕಾರ, ಭಾರತವು ಪ್ರಸ್ತುತ 50 ದಿನಗಳವರೆಗೆ ಕಚ್ಚಾ ತೈಲ ಮತ್ತು ಸಂಸ್ಕರಿಸಿದ ಪೆಟ್ರೋಲಿಯಂ ಉತ್ಪನ್ನಗಳ ಒಟ್ಟು ದಾಸ್ತಾನನ್ನು ಹೊಂದಿದೆ. ಇದರಲ್ಲಿ 25 ದಿನಗಳ ಕಚ್ಚಾ ತೈಲ ಮತ್ತು 25 ದಿನಗಳ ಪೆಟ್ರೋಲಿಯಂ ಉತ್ಪನ್ನಗಳು ಸೇರಿವೆ. ಇದಲ್ಲದೆ, ಪಶ್ಚಿಮ ಏಷ್ಯಾದಲ್ಲಿ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ಅಧಿಕಾರಿಗಳು ಕಚ್ಚಾ ತೈಲ, ಎಲ್ ಪಿಜಿ ಮತ್ತು ಎಜಿ ಆಮದು ಮಾಡಿಕೊಳ್ಳಲು ಪರ್ಯಾಯ ದೇಶಗಳನ್ನು ಅನ್ವೇಷಿಸುತ್ತಿದ್ದಾರೆ.

ಕೊಲ್ಲಿಯಲ್ಲಿ ಬೆಳೆಯುತ್ತಿರುವ ಬಿಕ್ಕಟ್ಟು ಜಾಗತಿಕ ತೈಲ ಪೂರೈಕೆಯನ್ನು ಅಡ್ಡಿಪಡಿಸಿದರೆ ಭಾರತಕ್ಕೆ ಇಂಧನ ಪೂರೈಕೆಯಲ್ಲಿ ಸಹಾಯ ಮಾಡಲು ರಷ್ಯಾ ಸಿದ್ಧವಾಗಿದೆ ಎಂದು ಸೂಚಿಸಿದೆ. ಯಾವುದೇ ಬಿಕ್ಕಟ್ಟಿನಲ್ಲಿ ತನ್ನ ಇಂಧನ ಅಗತ್ಯಗಳನ್ನು ಪೂರೈಸಲು ಸಿದ್ಧವಾಗಿದೆ ಎಂದು ರಷ್ಯಾ ಭಾರತಕ್ಕೆ ಭರವಸೆ ನೀಡಿದೆ. ಭಾರತವು ತನಗೆ ಅಗತ್ಯ ಇರುವ ಕಚ್ಚಾ ತೈಲದ ಸುಮಾರು 88 ಪ್ರತಿಶತದಷ್ಟು ಪೆಟ್ರೋಲ್ ಮತ್ತು ಡೀಸೆಲ್ ನಂತಹ ಇಂಧನಗಳಿಗೆ ಕಚ್ಚಾ ವಸ್ತುವನ್ನು ಆಮದು ಮಾಡಿಕೊಳ್ಳುತ್ತದೆ. ಇದರಲ್ಲಿ ಶೇ.50ಕ್ಕಿಂತ ಹೆಚ್ಚು ಮಧ್ಯಪ್ರಾಚ್ಯ ದೇಶಗಳಿಂದಲೇ ಭಾರತಕ್ಕೆ ಆಮದಾಗುತ್ತದೆ. ಇದು ಕಿರಿದಾದ ಹಾರ್ಮುಜ್ ಜಲಸಂಧಿಯ ಮೂಲಕವೇ ಭಾರತಕ್ಕೆ ಬರುತ್ತದೆ. ಆದರೆ ಇರಾನ್ ಮೇಲೆ ಇಸ್ರೇಲ್–ಅಮೆರಿಕ ಯುದ್ಧದ ಬಿಕ್ಕಟ್ಟಿನಿಂದಾಗಿ ಇರಾನ್ ಹಾರ್ಮುಜ್ ಜಲಸಂಧಿಯನ್ನು ಬಂದ್ ಮಾಡಿದೆ.

ಹೊರ್ಮುಜ್ ಜಲಸಂಧಿಯ ಮೇಲಿನ ಅವಲಂಬನೆ ಭಾರತದ ಒಟ್ಟು ಕಚ್ಚಾತೈಲ ಮತ್ತು ಎಲ್‌ಪಿಜಿ ಆಮದಿನ ಅರ್ಧದಷ್ಟು ಭಾಗವು ಹೊರ್ಮುಜ್ ಜಲಸಂಧಿಯ ಮೂಲಕವೇ ಸಾಗುತ್ತದೆ. ಆದ–'ರೆ ಇತ್ತೀಚಿನ ಮಿಲಿಟರಿ ದಾಳಿಗಳು ಮತ್ತು ವಿಮಾ ಸೌಲಭ್ಯಗಳ ಹಿಂತೆಗೆತದಿಂದಾಗಿ ಈ ಮಾರ್ಗದಲ್ಲಿ ಹಡಗುಗಳ ಸಂಚಾರಕ್ಕೆ ಅಡ್ಡಿಯಾಗಿದೆ. ಈ ಹಿನ್ನೆಲೆಯಲ್ಲಿ ಸರ್ಕಾರವು ಪರ್ಯಾಯ ಮಾರ್ಗಗಳ ಮೂಲಕ ತೈಲ ಆಮದು ಮಾಡಿಕೊಳ್ಳಲು ಯೋಜಿಸುತ್ತಿದೆ. ಈ ಹಿಂದೆ ಅಮೆರಿಕದೊಂದಿಗಿನ ಒಪ್ಪಂದದಂತೆ ರಷ್ಯಾದಿಂದ ತೈಲ ಖರೀದಿಯನ್ನು ಕಡಿಮೆ ಮಾಡಲು ಭಾರತ ನಿರ್ಧರಿಸಿತ್ತು. ಆದ–'ರೆ ಈಗಿನ ಭೌಗೋಳಿಕ ರಾಜಕೀಯ

4ನೇ ಪುಟಕ್ಕೆ

## ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿ ವತಿಯಿಂದ ಆಯಾತೊಲ್ಲಾ ಅಲಿ ಖಮೇನಿ ಸಾಹೇಬ್ ಗೆ ಸಂತಾಪ



**ನೈಜ್ಯ ದೆಸೆ ನ್ಯೂಸ್**

ಲಿಂಗಸುಗೂರು: ದಿನಾಂಕ : 28/02/2026 ರಂದು ನೂರು ದಿನ ಹೇಡಿಯಾಗಿ ಬದುಕುವುಕ್ಕಿಂತ ಮೂರು ದಿನ ಹುಲಿಯಾಗಿ ಬದುಕುಬೇಕು ಎನ್ನುವ ಶೇರ್ ಎ ಮೈಸೂರು ಹಜರತ್ ಟಿಪ್ಪು ಸುಲ್ತಾನ್ ರವರ ತತ್ವದಡಿಯಲ್ಲಿ ದೇಶದ ಸಲುವಾಗಿ ತಮ್ಮ ಪ್ರಾಣವನ್ನೇ ಪವಿತ್ರ ರಂಜಾನ್ ಮಾಸದಲ್ಲಿ ದೇಶಗೋಸ್ಕರ ಬಲಿದಾನ ನೀಡಿ ವೀರ ಮರಣ ಹೊಂದಿ ಹುತಾತ್ಮರಾದ ನಮ್ಮ ಇಸ್ಲಾಂ ಧರ್ಮದ ಧಾರ್ಮಿಕ ಜಾಗತಿಕ ಮುಖಂಡರು.

ಹಾಗೂ ಇರಾನ್ ದೇಶದ ಸರ್ವೋಚ್ಚ ನಾಯಕ ಜನಾಬ್ ಆಯಾತೊಲ್ಲಾ ಅಲಿ ಖಮೇನಿ ಸಾಹೇಬ್ ರವರ ಸಾವಿನ ಸುದ್ದಿ ಇಡೀ ನಮ್ಮ ಇಸ್ಲಾಂ ಧರ್ಮ ವಿಷಾದ ಪಡುವ ದುಃಖಕರ ಸಂಗತಿಯಾಗಿದೆ. ಈ ಘಟನೆಗೆ ಸಂಭಂದಪಟ್ಟಂತೆ ಅಂಜುಮನ್–ಎ–ಮುಸ್ಲಿಮೀನ್ ಲಿಂಗಸೂಗೂರ ತಾಲೂಕು ಕಮಿಟಿವತಿಯಿಂದ ಸಂತಾಪ ಸೂಚಕ ಕಾರ್ಯಕ್ರಮವನ್ನ ಏರ್ಪಡಿಸಲಾಗಿ–ತ್ತು ಈ ಸಂದರ್ಭದಲ್ಲಿ ಸಮುದಾಯದ ಮುಖಾಂಡರಾದ ಏಈಅ ಮೊಹಮ್ಮದ್ ಭಾಯಿ,

ಫೈಸಲ್ ಚಾವುಸ್ ಭಾಯಿ, ಇಬ್ರಾಹಿಂ ಭಾಯಿ, ಅಬ್ದುಲ್ ವಾಹಿದ್ ಭಾಯಿ ಇನ್ನಿತರ ಮುಖಂಡರು & ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಗೌರವ ಅಧ್ಯಕ್ಷರಾದ ಅನ್ಸರುದ್ದಿನ್ ಭಾಯಿ, ಅಧ್ಯಕ್ಷರಾದ ಹುಸೇನ್ ಭಾಷಾ ಕೆ., ಪ್ರಧಾನ ಕಾರ್ಯದರ್ಶಿಯಾದ ಅಮೀನ್ ಭಾಯಿ, ಮುದಗಲ್ ಅಂಜುಮನ್ ಕಮಿಟಿಯ ಅಧ್ಯಕ್ಷರಾದ ಮಹ್ಮದ್ ರಸೂಲ್, ದಾದಾಪೀರ್ ಭಾಯಿ, ರಾಜಸಾಬ್, ರಫಿ ಸಂಪಂಗಿ, ಮೌಲಾ ಭಾಯಿ, ವಸಿಂ, ಹಜರತ್, ಫಾರೂಕ್, ಖಾಸಿಂ ಇನ್ನಿತರ ಸದಸ್ಯರು ಹಾಗೂ ಅಂಜುಮನ್ ಲಿಂಗಸೂಗೂರ ತಾಲೂಕು ಕಮಿಟಿಯ ಅಪಾರ ಪ್ರಮಾಣದ ಬೆಂಬಲಿಗರು ಉಪಸ್ಥಿತರಿದ್ದರು.

## ನೀರಮಾನ್ವಿ ಜೆಲ್ಲಿ ಕುಟುಂಬದ ಯುವಕ ಶಸಸ್ತ್ರಪಡೆಗೆ ನೇಮಕ

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ಪ್ರಸಿದ್ಧವಾದ ಶ್ರೀ ರೇಣುಕಾ ಯಲ್ಲಮ್ಮ ದೇವಿ ನೀರಮಾನ್ವಿ ಗ್ರಾಮದ ಜೆಲ್ಲಿ ಕುಟುಂಬದ ಮತ್ತೊಬ್ಬ ಯುವಕ ಭಾರತೀಯ ಗಡಿ ಭದ್ರತಾಪಡೆಗೆ ಆಯ್ಕೆಯಾಗಿದ್ದು ಇಂದು ಗ್ರಾಮದಿಂದ ಜಮ್ಮು ಕಾಶ್ಮೀರದ ಉದಾಂಪುರ್ ತರಬೇತಿ ಕೇಂದ್ರಕ್ಕೆ ಹೋಗುವುದಕ್ಕೂ ಮುಂಚೆ ಇಂದು ಸ್ವಾಮಿ ವಿವೇಕಾನಂದ ಸದ್ಭಾವನಾ ಸಮಿತಿ ನೀರಮಾನ್ವಿ ಹಾಗೂ ಗ್ರಾಮದ ಹಲವು ಸಂಘಟನೆಯ ಮುಖಂಡರು.**

ಕುಟುಂಬಸ್ಥರು ಊರಿನ ಹಿರಿಯರು ಅದ್ದೂರಿಯಾಗಿ ಛತ್ರಪತಿ ಶಿವಾಜಿ ಮಹಾರಾಜರ ಸರ್ಕಲ್ ನಲ್ಲಿ ಗೌರವಿಸಿ ಸನ್ಮಾನಿಸಿ ಇಂದು ಗ್ರಾಮದಿಂದ ಸಂತೋಷದಿಂದ ಕಳುಹಿಸಿಕೊಟ್ಟರು.



ಈ ಗ್ರಾಮವು ಸಾಹಿತ್ಯಕ್ಕೂ ಹೆಸರಾಗಿದೆ ಜಾನಪದ ಕಲೆಗೂ ಹೆಸರಾಗಿದೆ ಅದೇ ರೀತಿಯಾಗಿ ಈ ಗ್ರಾಮದ ಯುವಕರು ದೇಶ ಸೇವೆಯಲ್ಲಿ ಮುಂಚೂಣಿಯಲ್ಲಿದ್ದಾರೆ ಈ ಗ್ರಾಮದ ಯುವಕರು ಇನ್ನು ಹೆಚ್ಚಾಗಿ ಒಳ್ಳೆಯ ಹುದ್ದೆಗಳನ್ನು ಪಡೆಯಲಿ ಎಂದು ನಾವು ಹಾರೈಸುತ್ತೇವೆಂದು ಗ್ರಾಮ ಪಂಚಾಯಿತಿ ಕಾರ್ಯದರ್ಶಿ ತಮ್ಮ ಅನಿಸಿಕ ಹಂಚಿಕೊಂಡರು. ಈ ಸಂದರ್ಭದಲ್ಲಿ ಗ್ರಾಮ ಪಂಚಾಯತಿಯ ಸಿಬ್ಬಂದಿಗಳು ಸ್ವಾಮಿ ವಿವೇಕಾನಂದ ಸದ್ಭಾವನಾ ಸಮಿತಿ ಪದಾಧಿಕಾರಿಗಳು ಎಲ್ಲಾ ಸಮುದಾಯದ ಹಿರಿಯ ಮುಖಂಡರು ಹಾಗೂ ಕುಟುಂಬಸ್ಥರು ಹಾಜರಿದ್ದರು.

## ಮಸ್ಕಿಯಲ್ಲಿ ಭಾವೈಕ್ಯತೆಯಿಂದ ಅದ್ದೂರಿಯಾಗಿ ಜರುಗಿದ ಯಮನೂರಪ್ಪ ಉರುಸು

**ನೈಜ್ಯ ದೆಸೆ ನ್ಯೂಸ್**

**ಮಸ್ಕಿ: ಪಟ್ಟಣದ ವಾಲ್ಮೀಕಿ ನಗರದಲ್ಲಿರುವ ಯಮನೂರಪ್ಪ ದರ್ಗಾದ 36ನೇ ವರ್ಷದ ಉರುಸು ಗುರುವಾರ ಅದ್ದೂರಿಯಾಗಿ ಜರುಗಿತು. ಕಿಲ್ಲಾ ಬಡಾವಣೆ ಬಳಿಯ ಹಜರತ್ ಮೌಲಾಲಿ ದರ್ಗಾದಿಂದ ಗಂಧದ ಮೆರವಣಿಗೆಯೂ ಪಟ್ಟಣದ ಮುಖ್ಯ ರಸ್ತೆಗಳ ಮೂಲಕ ದರ್ಗಾ ತಲುಪಿತು.**

ದರ್ಗಾದಲ್ಲಿ ಜಾವೇದ್ ಖಾಜಿ ಕುರಾನ್ ಪಠಣ ಮಾಡಿದ ಬಳಿಕ ಗದ್ದುಗೆಗೆ ಪುಷ್ಪಾರ್ಚನೆ ಮಾಡಲಾಯಿತು. ಪಟ್ಟಣದ ಗಣ್ಯರು ದರ್ಗಾಕ್ಕೆ ಭೇಟಿ ನೀಡಿ ಯಮನೂರಪ್ಪ ದರ್ಶನ ಪಡೆದರು. ದರ್ಗಾ ಸಮಿತಿ ಅಧ್ಯಕ್ಷ ಬಸನಗೌಡ ಪಾಟೀಲ್ ನೇತ್ರತ್ವದಲ್ಲಿ ನಡೆದ




ಮೆರವಣಿಗೆಯಲ್ಲಿ ಚಿದಾನಂದ ಜೋಗಿನ್, ಹನುಮಂತ ತೋಳದಿನ್ನಿ, ಶಂಕರಗೌಡ ಪಾಟೀಲ್, ಯಮನೂರ ಬುದ್ದಿನ್ನಿ, ವೆಂಕಟೇಶ ಮಂಗನಾಳ, ಮೈನು ಕಿಲ್ಲಾ, ನರಸಪ್ಪ, ದ್ಯಾಮಪ್ಪ, ಪಂಪಣ್ಣ, ದುರ್ಗಪ್ಪ ಮುದ್ದಾಪೂರ ಸೇರಿದಂತೆ ಇನ್ನಿತರರಿದ್ದರು.

## ನಕ್ಕುಂದಿ ಗ್ರಾಮ ಪಂಚಾಯತ್‌ನಲ್ಲಿ 15ನೇ ಹಣಕಾಸು ಯೋಜನೆ ಅವ್ಯವಹಾರ ಆರೋಪ ಪಿಡಿಓ ಅಮಾನತು ಮಾಡುವಂತೆ ಆಗ್ರಹ

**ನೈಜ್ಯ ದೆಸೆ ನ್ಯೂಸ್**

**ಮಾನ್ವಿ: ತಾಲೂಕಿನ ನಕ್ಕುಂದಿ ಗ್ರಾಮ ಪಂಚಾಯತಿ ಕಾರ್ಯಾಲಯದ ಮುಂದೆ ಕೃಷಿ ಕೂಲಿ ಕಾರ್ಮಿಕರ ಹಕ್ಕುಗಳ ಹೋರಾಟ ಸಮಿತಿ ವತಿಯಿಂದ ವಿವಿಧ ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಪ್ರತಿಭಟನೆ ನಡೆಸಿ, ತಾಲೂಕ ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಖಾಲಿದ್ ಅಹ್ಮದ್ ಅವರಿಗೆ ಮನವಿ ಪತ್ರ ಸಲ್ಲಿಸಲಾಯಿತು.**

ಈ ಸಂದರ್ಭದಲ್ಲಿ ಮಾತನಾಡಿದ ತಾಲೂಕ ಅಧ್ಯಕ್ಷ ಬಂಡೆಗುರು ಕರೆಗುಡ್ಡ, ನಕ್ಕುಂದಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ 15ನೇ ಹಣ–ಕಾಸು ಯೋಜನೆಯ 2024–25ನೇ ಸಾಲಿನ ಅನುದಾನದಲ್ಲಿ ಭಾರೀ ಅವ್ಯವಹಾರ ನಡೆದಿದೆ ಎಂದು ಆರೋಪಿಸಿದರು. ಗ್ರಾಮ ಪಂಚಾಯತ್



ವ್ಯಾಪ್ತಿಯ ಹಳ್ಳಿಗಳಲ್ಲಿ ಯಾವುದೇ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸದೆ ಅನುದಾನದ ಹಣವನ್ನು ಎತ್ತುವಳಿ ಮಾಡಲಾಗಿದೆ. ಕೈಗೊಂಡಿರುವ ಕಾಮಗಾರಿಗಳ ಶೀರ್ಷಿಕೆಯಲ್ಲಿ ಅಲ್ಪಸ್ವಲ್ಪ ಬದಲಾವಣೆ ಮಾಡಿ ಪುನಃ ಅನುದಾನ ಎತ್ತುವಳಿ ಮಾಡಿರುವುದು ಕಂಡುಬರುತ್ತಿದೆ ಎಂದು ಹೇಳಿದರು.

ಈ ಹಿನ್ನೆಲೆಯಲ್ಲಿ 15ನೇ ಹಣಕಾಸಿನ ಅನುದಾನ ಬಳಕೆಯ ಕುರಿತು ಸಮಗ್ರ ತನಿಖೆ ನಡೆಸಿ, ಯಾವ ಕಾಮಗಾರಿಗಳಿಗೆ ಹಣ ಬಳಸಲಾಗಿದೆ ಎಂಬುದನ್ನು ಸ್ಥಳೀಯ ನಿವಾಸಿಗಳಿಂದ ಮಹಜರು ಪಡೆದು ಪರಿಶೀಲಿಸಬೇಕು ಹಾಗೂ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಇನ್ನೂ ಪಂಚಾಯತಿ ವ್ಯಾಪ್ತಿಯ ಗ್ರಾಮಗಳಲ್ಲಿ ಮೋಟಾರ್ ರಿಪೇರಿ ಹಾಗೂ ಖರೀದಿ ಹೆಸ–ರಿನಲ್ಲಿ ಭ್ರಷ್ಟಾಚಾರ ನಡೆಸಲಾಗಿದೆ. ಕಚೇರಿ ಅಭಿವೃದ್ಧಿ ಅನುದಾನದಲ್ಲಿ ಇಂಟರ್ನೆಟ್ ವೆಚ್ಚ, ಕಾರ್ಟೇಜ್ ಖರೀದಿ, ಕಂಪ್ಯೂಟರ್ ಖರೀದಿ ಮತ್ತು ರಿಪೇರಿ ಹೆಸರಿನಲ್ಲಿ ಅವ್ಯವಹಾರ ನಡೆದಿದೆ.

ವಸತಿ ನಿಲಯ ಮಂಜೂರು ಮಾಡಿಕೊಡುವುದಾಗಿ ಹೇಳಿ ಸಾರ್ವಜನಿಕರಿಂದ 5 ಸಾವಿರದಿಂದ 10 ಸಾವಿರ ರೂಪಾಯಿ ವರೆಗೆ ಹಣ ಪಡೆದು ವಂಚಿಸಲಾಗಿದೆ ಎಂದು ದೂ–ರಿದರು. ಕರೆಗುಡ್ಡ ಗ್ರಾಮದ ಗ್ರಂಥಾಲಯವನ್ನು ಸೂಕ್ತ ವ್ಯವಸ್ಥೆಯಿಲ್ಲದ ಕಾರಣ ಬೇರೆ ಕಡೆ ವರ್ಗಾಯಿಸಬೇಕು, ನರೇಗಾ ಯೋಜನೆಯಡಿ ಕೂಲಿ ಕಾರ್ಮಿಕರಿಗೆ ಕನಿಷ್ಠ ಕೂಲಿ ನೀಡದೇ ಕಡಿಮೆ ಕೂಲಿ ನೀಡಲಾಗುತ್ತಿದೆ. ಕೆಲಸದ ಸ್ಥಳದಲ್ಲಿ ನೀರು, ನೆರಳು ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಕಲ್ಪಿಸಬೇಕು ಎಂದು ಆಗ್ರಹಿಸಿದರು. ಜೊತೆಗೆ ಕರೆಗುಡ್ಡ ಗ್ರಾಮದ ಸರ್ಕಾರಿ ಶಾಲೆಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳನ್ನು ವಿತರಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷ ಮೌನೇಶ ಜಾಲವಾಡಗಿ, ಜಿ. ಹನುಮೇಶ ನಾಯಕ, ಮರೇಗೌಡ, ಕುಮಾರ, ಹುಸೇನಪ್ಪ, ಮೌನೇಶ, ರವಿ, ಪಾಲರಾಜ, ಹನುಮಯ್ಯ ನಾಯಕ, ಅಂಬಣ್ಣ ನಾಯಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಸಾಹಿತ್ಯ ಸಿಂಚನ

ಸಖ್ಯ..!

ಗೆಳತಿ ನಿನ್ನ ಒಲವಿನ
ಭಾವ ಬೆಳದಿಂಗಳಿನಲ್ಲಿ
ಉಕ್ಕುಕ್ಕಿ ಮೊರೆಯುತಿಹುದು
ಜೀವ ಶರಧಿಯಾಗಿ.!

ಗೆಳತಿ ನಿನ್ನ ಕೊರಳಿನ
ಕೊಳಲ ನಾದಸ್ವರಗಳಲ್ಲಿ
ಉಲಿದುಲಿದು ಹಾಡುತಿಹುದು
ಹೃದಯ ಹಕ್ಕಿಯಾಗಿ.!

ಗೆಳತಿ ನಿನ್ನ ನಗುವಿನ
ಹೊನಲ ಅಲೆಗಳಲ್ಲಿ
ಏರಿಜಾರಿ ತೇಲುತಿಹುದು
ಮನಸು ದೋಣಿಯಾಗಿ.!

ಗೆಳತಿ ನಿನ್ನ ಮೌನದಾ
ತಿಳಿಗಾಳಿ ಸ್ಪರ್ಶದಲ್ಲಿ
ಪುಳಕದಿ ಪಸರಿಸುತಿಹುದು
ತನುಮನ ಸುಗಂಧವಾಗಿ.!

ಗೆಳತಿ ನಿನ್ನ ಕಂಗಳಾ
ಕೋಲ್ಮಿಂಚ ಬೆಳಕಿನಲ್ಲಿ
ಮೆಲ್ಲಮೂಡಿ ಹೊಳೆದಿಹುದು
ಕನಸುಗಳು ಕಾಮನಬಿಲ್ಲಾಗಿ.!

ಗೆಳತಿ ನಿನ್ನ ನುಡಿಗಳಾ
ಮಂಜುಳ ತರಂಗಗಳಲ್ಲಿ
ಉಸಿರುಸಿರು ಪುಳಕಿಸಿಹುದು
ಹೃದಯವೇ ಹಚ್ಚಹಸಿರಾಗಿ.!

ಗೆಳತಿ ನಿನ್ನ ಸಖ್ಯದಾ
ನವ್ಯದಿವ್ಯ ಸಾನ್ನಿಧ್ಯದಲ್ಲಿ
ಬೆಳಕಾಗಿ ಬೆಳಗುತಿಹುದು
ಬಾಳಭರವಸೆ ಚಿರದೀಪವಾಗಿ.!

ಗೆಳತಿ ನಿನ್ನ ಅನುರಾಗದಾ
ಅಕ್ಷಯಪ್ರೀತಿ ಸಾಮಿಪ್ಯದಲ್ಲಿ
ಭವಿಷ್ಯವೇ ಬೆಳಕಾಗಿಹುದು
ಪ್ರೇಮಜ್ಯೋತಿ ದೇದೀಪ್ಯವಾಗಿ.!

**ಎ.ಎನ್.ರಮೇಶ್.ಗುಬ್ಬಿ**

# ಕಡಿಮೆ ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್ ಅಳವಡಿಕೆ: ರೈತರ ಬೆಳೆಗಳಿಗೆ ಹಾನಿ ಟಿಸಿ ಸುಟ್ಟ 24 ಗಂಟೆಯೊಳಗೆ ಬದಲಾಯಿಸುವಂತೆ ಆಗ್ರಹ







ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಚಿನ್ನದ ಗಣಿ ಹಟ್ಟಿ ಸಮೀಪದ ನಿಲೋಗಲ್ ನಲ್ಲಿ ವಿದ್ಯುತ್ ಇಲಾಖೆಯ ನಿರ್ಲಕ್ಷ್ಯದಿಂದ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕಡಿಮೆ ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸುವುದರಿಂದ ಅವು ಪದೇಪದೇ ಸುಟ್ಟು ಹೋಗುತ್ತಿದ್ದು, ಇದರ ಪರಿಣಾಮವಾಗಿ ರೈತರ ಕೃಷಿ ಚಟುವಟಿಕೆಗಳು ಅಸ್ತವ್ಯಸ್ತವಾಗಿವೆ.**

ಟಿಸಿ ಸುಟ್ಟುಹೋದ ಬಳಿಕ ಹಲವಾರು ದಿನಗಳವರೆಗೆ ಬದಲಾವಣೆ ಮಾಡದಿರುವುದರಿಂದ ರೈತರ ಪಂಪ್‌ಸೆಟ್‌ಗಳು ಕಾರ್ಯನಿರ್ವಹಿಸದೆ ಬೆಳೆಗಳು ಒಣಗುತ್ತಿವೆ. ಇದರಿಂದ ಉತ್ತಮ ಇಳುವರಿಗೆ ಹೊಡೆತ ಬೀಳುತ್ತಿದ್ದು, ರೈತರಿಗೆ ಭಾರೀ ಆರ್ಥಿಕ ನಷ್ಟವಾಗುತ್ತಿದೆ ಎಂದು ನಿಲೋಗಲ್ ಗ್ರಾಮದ ರೈತರು ಆಕ್ರೋಶ ವ್ಯಕ್ತಪಡಿಸಿದರು. ಈ ಬಗ್ಗೆ ಹಟ್ಟಿಯ ಗುಲಬರ್ಗಾ ವಿದ್ಯುತ್ ಸರಬರಾಜು ಇಲಾಖೆಯ ಶಾಖಾಧಿಕಾರಿಗೆ ಮನವಿ ಪತ್ರವನ್ನು ಸಲ್ಲಿಸಿದ ರೈತರು, ಪ್ರತೀ ಸಾರಿ ಟಿಸಿ ಅಳವಡಿಸುವಾಗ ರೈತರಿಂದ 10,000 ರಿಂದ 20,000 ವರೆಗೆ ವಸೂಲಿ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ.

ಈಗಾಗಲೇ ನಷ್ಟದಲ್ಲಿರುವ ರೈತರಿಗೆ ಇದು ಮತ್ತೊಂದು ಹೊರೆ ಆಗಿದೆ. ಈ ರೀತಿಯ ವಸೂಲಿಗೆ ತಕ್ಷಣ ಕಡಿವಾಣ ಹಾಕಬೇಕು ಎಂದು ರೈತರು ಆಗ್ರಹಿಸಿದ್ದಾರೆ. ಟಿಸಿ ಸುಟ್ಟ 24 ಗಂಟೆಯೊಳಗೆ ಹೊಸ ಟ್ರಾನ್ಸ್‌ಫಾರ್ಮರ್ ಅಳವಡಿಸುವ ಕ್ರಮ ಕೈಗೊಳ್ಳಬೇಕು. ಜೊತೆಗೆ ಭವಿಷ್ಯದಲ್ಲಿ ಸಮಸ್ಯೆ ಮರುಕಳಿಸದಂತೆ ಕನಿಷ್ಠ 100 ಕೆವಿ ಸಾಮರ್ಥ್ಯದ ಟ್ರಾನ್ಸ್‌ಫಾರ್ಮರ್‌ಗಳನ್ನು ಅಳವಡಿಸಬೇಕು ಎಂದು ರೈತರು ಒತ್ತಾಯಿಸಿದ್ದಾರೆ. ಸಂಬಂಧಪಟ್ಟ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ರೈತರ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಬೇಕು.

ನಿರ್ಲಕ್ಷ್ಯ ವಹಿಸಿದರೆ ಕಛೇರಿ ಮುಂದೆ ಪ್ರತಿಭಟನಾ ಧರಣಿ ಮಾಡಲಾಗುತ್ತದೆ ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸವಾದಿ) ತಾಲೂಕು ಕಾರ್ಯದರ್ಶಿ ರಮೇಶ ವೀರಾಪೂರು ಎಚ್ಚರಿಹಿಸಿದ್ದಾರೆ. ??ಈ ಸಂಧರ್ಭದಲ್ಲಿ ರೈತರಾದ ನಾಗರಾಜ್, ಅಮರಪ್ಪ, ಹುಸೇನಸಾಬ್, ಶರಣಬಸವ, ಹಮೀದ್, ಹುಸೇನ್ ಸಾಬ್, ಗೌಡಪ್ಪಗೌಡ, ಯಂಕಣ್ಣ,

# ಕವಿತಾಳ ತಾಲ್ಲೂಕು ಕೇಂದ್ರವನ್ನಾಗಿಸಲು ಒತ್ತಾಯಿಸಿ ಪ್ರತಿಭಟನೆ



ನೈಜ್ಯ ದೆಸೆ ನ್ಯೂಸ್

**ಕವಿತಾಳ: ಇಲ್ಲಿಯ ಪೊಲೀಸ್ ಠಾಣೆ ವ್ಯಾಪ್ತಿಗೆ 11 ಗ್ರಾಮ ಪಂಚಾಯತಿಗಳ ಒಟ್ಟು 69 ಹಳ್ಳಿಗಳು ಮತ್ತು ಕ್ಯಾಂಪ್‌ಗಳು ಬರುತ್ತವೆ, ಭೌಗೋಳಿಕ ವಿಸ್ತೀರ್ಣ, ಆಸ್ಪತ್ರೆ, ಶೈಕ್ಷಣಿಕ, ಸಾರಿಗೆ ಸಂಪರ್ಕ ವ್ಯವಸ್ಥೆ ಹಾಗೂ ವ್ಯವಹಾರಿಕ ಕೇಂದ್ರವಾದ ಕವಿತಾಳ ಪಟ್ಟಣವನ್ನು ತಾಲ್ಲೂಕು ಕೇಂದ್ರವನ್ನಾಗಿ ಘೋಷಿಸಬೇಕು' ಎಂದು ಅಭಿನವ ಸಿದ್ದಲಿಂಗ ಮಹಾಸ್ವಾಮಿಜೀ ಕಲ್ಮಠ ಅವರು ಆಗ್ರಹಿಸಿದರು.**


ಪಟ್ಟಣದಲ್ಲಿ ಇಂದು ನಡೆದ ತಾಲ್ಲೂಕು ಹೋರಾಟ ಸಮಿತಿಯ ಪ್ರತಿಭಟನೆಯ ನೇತೃತ್ವ ವಹಿಸಿ ಅವರು ಮಾತನಾಡಿದರು. 'ಬೇಡಿಕೆಗೆ ಸ್ಪಂದಿಸದಿದ್ದರೆ ಉಪವಾಸ ಸತ್ಯಾಗ್ರಹ ಸೇರಿದಂತೆ ತೀವ್ರ ಹೋರಾಟ ನಡೆಸಲಾಗುವುದು' ಎಂದು ಎಚ್ಚರಿಸಿದರು. 'ತಾಲ್ಲೂಕು ಕೇಂದ್ರವಾಗಲು ಅರ್ಹತೆ ಹೊಂದಿದ ಕವಿತಾಳ ಪಟ್ಟಣದ ಬಗ್ಗೆ ಹುಂಡೇಕಾರ ಸಮಿತಿ ವರದಿಯಲ್ಲಿ ಪ್ರಸ್ತಾಪಿಸಲಾಗಿದೆ. ರಾಜಕೀಯ ಇತಾಸಕ್ತಿ ಮತ್ತು ಹೋರಾಟದ ಕೊರತೆಯಿಂದ ಬೇಡಿಕೆ ಈಡೇರಿಲ್ಲ, ಇದೀಗ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಜನರ ಬೆಂಬಲ ಪಡೆದು ಹೋರಾಟ ನಡೆಸಲು ತೀರ್ಮಾನಿಸಲಾಗಿದೆ, ಸರ್ಕಾರದ ಮುಂದಿನ ನಡೆ ಅನುಸರಿಸಿ ಹೋರಾಟದ ರೂಪುರೇಷ ಸಿದ್ದಪಡಿಸಲಾಗುವುದು' ಎಂದು ಪ್ರತಿಭಟನಾಕಾರರು ಹೇಳಿದರು.

ಅಂಬೇಡ್ಕರ್ ವೃತ್ತದಲ್ಲಿ ಡಾ.ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡಿ ಪ್ರಮುಖ ರಸ್ತೆಗಳಲ್ಲಿ ಮೆರವಣಿಗೆ ನಡೆಸಲಾಯಿತು. ಸ್ಥಳಕ್ಕೆ ಆಗಮಿಸಿದ ಸಿರವಾರ ತಹಸೀಲ್ದಾರ್ ಅಶೋಕ್ ಪವಾರ್ ಅವರಿಗೆ ಮುಖ್ಯ ಮಂತ್ರಿಗಳಿಗೆ ಬರೆದ ಮನವಿಯನ್ನು ಸಲ್ಲಿಸಲಾಯಿತು. ಪ್ರತಿಭಟನೆಯಲ್ಲಿ ಕವಿತಾಳ ಚರ್ಚಿನ ಫಾದರ್ ಆರೋಗ್ಯಪ್ಪ, ಕರಿಯಪ್ಪ ಪೂಜಾರಿ, ಜಿಲ್ಲಾ ಪಂಚಾಯಿ ಮಾಜಿ ಸದಸ್ಯ ಕಿರಿಲಿಂಗಪ್ಪ ಮುಖಂಡರಾದ ಬಸಪ್ಪ ಕಂದಗಲ್, ಕರೀಂಸಾಬ್, ಗಂಗ್ಪಪ ದಿನ್ನಿ, ಯಮನಪ್ಪ ದಿನ್ನಿ, ನಿಂಗಪ್ಪ ತೊಳ, ಬಲವಂತ್ರಾಯಗೌಡ, ಮಲ್ಲಿಕಾರ್ಜುನಗೌಡ, ಶಿವಣ್ಣ ವಕೀಲ, ಲಿಂಗಯ್ಯ ನಾಯಕ್ ಸೈದಾಪುರ, ಅಯ್ಯಪ್ಪನಿಲೋಗಲ್, ಮೌನೇಶ ಹಿರೇಕುರುಬರು, ಮಲ್ಲಪ್ಪ ಬಸಾಪೂರ, ಯಾಕುಬ್, ಅರಳಪ್ಪ ತುಪ್ಪದೂರು, ಹೆಚ್. ಬಸವರಾಜ ಕವಿತಾಳ್, ಎಂ.ಡಿ.ಮಹೇಬೂಬ್, ಕರಿಯಪ್ಪ ಅಡ್ಡೆ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಮತ್ತು ಸೈದಾಪುರ, ಹುಸೇನಪುರ, ವಟಗಲ್, ಗುಡದಿನ್ನಿ ಸೇರಿದಂತೆ ಇನ್ನಿತರ ಗ್ರಾಮಗಳ ಗ್ರಾಮಗಳ ಮುಖಂಡರು ಭಾಗವಹಿಸಿದ್ದರು.

## ಬೊಮ್ಮನಹಳ್ಳಿ ಪಿಕೆಪಿಎಸ್ ನೂತನ ಅಧ್ಯಕ್ಷ ಬಿರಾದಾರಗೆ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ಇದರ ಆಡಳಿತ ಮಂಡಳಿಗೆ ನೂತನವಾಗಿ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದ ಮಡಿವಾಳಪ್ಪ (ಮಡುಸೌಕಾರ) ಬಿರಾದಾರ ಇವರನ್ನು ಮಿಣಜಗಿ ಗ್ರಾಮಸ್ಥರು ಸನ್ಮಾನಿಸಿ ಗೌರವಿಸಿದರು.**



ಈ ಸಂದರ್ಭದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ನೂತನ ಅಧ್ಯಕ್ಷ ಮಡುಸೌಕಾರ ಬಿರಾದಾರ ಅವರು ಇವತ್ತು ಸಂಘದ ಆಡಳಿತ ಮಂಡಳಿ ಸದಸ್ಯರ ಜೊತೆಗೆ ತಾವೆಲ್ಲರೂ ಸಹಕರಿಸಿ ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡಿದ್ದೀರಿ ನಿಮ್ಮ ಈ ಪ್ರೀತಿ ವಿಶ್ವಾಸಕ್ಕೆ ಚಿರಋಣಿಯಾಗಿರುವೆ. ನನ್ನ ಈ ಅವಧಿಯಲ್ಲಿ ಸಂಘದ ಅಭಿವೃದ್ಧಿಗೆ ಶಕ್ತಿಮೀರಿ ಪ್ರಯತ್ನಿಸುತ್ತೇನೆ ಎಂದರು. ಈ ಸಮಯದಲ್ಲಿ ಗಣ್ಯರಾದ ಗುರಪ್ಪಗೌಡ ಪಾಟೀಲ, ಶ್ರೀಶೈಲ್ ವಜ್ಜಲ,ಜಿ.ಬಿ.ಪಾಟೀಲ, ಗೊಟಖಂಡಕಿ ಎಸ್‌ಡಿಎಂಸಿ ಅಧ್ಯಕ್ಷ ಬಸನಗೌಡ ಬಿರಾದಾರ, ಮಹಾಂತೇಶ ಬಿರಾದಾರ, ಶರಣಗೌಡ ಬಿರಾದಾರ, ಗಿರೀಶ ತಳವಾರ ಹಾಗೂ ಬಸನಗೌಡ ಬಿರಾದಾರ ಮತ್ತಿತರರು ಇದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

# ಜಾಲಹಳ್ಳಿಯಲ್ಲಿ ಶ್ರೀ ಲಕ್ಷ್ಮಿ ರಂಗನಾಥ ಪೆಟ್ರೋಲಿಯಮ್ಸ್ ಉದ್ಘಾಟನೆ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲೆಯ ದೇವದುರ್ಗ ತಾಲೂಕಿನ ಜಾಲಹಳ್ಳಿ ಗ್ರಾಮದಲ್ಲಿ, ರಾಜ್ಯ ಹೆದ್ದಾರಿಗೆ ಹೊಂದಿಕೊಂಡು ನಿರ್ಮಿಸಲಾದ ಊಕಅಖ ಶ್ರೀ ಲಕ್ಷ್ಮಿ ರಂಗನಾಥ ಪೆಟ್ರೋಲಿಯಮ್ಸ್ ಪೆಟ್ರೋಲ್ ಬಂಕ್ ಅನ್ನು ಉದ್ಘಾಟಿಸಲಾಯಿತು. ಶ್ರೀ ಲಕ್ಷ್ಮಿ ರಂಗನಾಥ ಪೆಟ್ರೋಲಿಯಮ್ ಪೆಟ್ರೋಲ್ ಬಂಕ್ ಅನ್ನು ರಾಯಚೂರು ಜಿಲ್ಲಾ ಖಆಅಆ ಬ್ಯಾಂಕ್ ನಿರ್ದೇಶಕರಾದ ರಾಜಶೇಖರ್ ನಾಯಕ್ ಅವರು ಉದ್ಘಾಟಿಸಿದರು.**

ಈ ಉದ್ಘಾಟನೆ ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾಯಚೂರು ಜಿಲ್ಲಾ ಕಾಂಗ್ರೆಸ್ ಸಮಿತಿಯ ಅಧ್ಯಕ್ಷರಾದ ಬಸವರಾಜ ಪಾಟೀಲ್ ಇಟಗಿ, ಮಾಜಿ ವಿಧಾನ ಪರಿಷತ್ ಸದಸ್ಯರು ವಹಿಸಿದ್ದರು ಮುಖ್ಯ ಅತಿಥಿಗಳಾಗಿ ದೇವದುರ್ಗ ಕಐಆ ಬ್ಯಾಂಕ್ ಮಾಜಿ ಅಧ್ಯಕ್ಷರಾದ ಮಲ್ಲನಗೌಡ ಗುಂಡರ್ತಿ, ತಾಲೂಕ ಜೆಡಿಎಸ್ ಪಕ್ಷದ ಅಧ್ಯಕ್ಷರಾದ ಬುಡ್ಡನ್ ಗೌಡ ಪಾಟೀಲ್ ಭಾಗವಹಿಸಿದರು. ವಿಶೇಷ ಆಹ್ವಾನಿತರು Ch.SVSS Ramanjaneya, prasad Chief Regional Manager HPCL Bellory Retail Region Rajashekar Banu Sales Manager, Nagamma W/O Siddappa Gumedar Jalahalli. ಕಾರ್ಯಕ್ರಮದಲ್ಲಿ ಅತಿಥಿಗಳಾಗಿ ಜಾಲಹಳ್ಳಿಯ ಮಾಜಿ ಜಿಲ್ಲಾ ಪಂಚಾಯತ್ ಸದಸ್ಯರಾದ ಬಸವರಾಜ್ ಪಂಪಾಪತಿ, ವಕೀಲರಾದ ವೇಣುಗೋಪಾಲ್ ನಾಯಕ್, ಜಾಲಹಳ್ಳಿ ಗ್ರಾಮ ಪಂಚಾಯತಿ ಮಾಜಿ ಅಧ್ಯಕ್ಷರಾದ ರಂಗಣ್ಣ ಕೊಲ್ಕರ್, ಪಂಚಾಯತ್ ಸದಸ್ಯರಾದ ತಿಮ್ಮಣ್ಣ ನಾಯಕ್ ದಿವಾನ್, ಅಯ್ಯಪ್ಪ ತಾತ, ಹಾಗೂ ಊರಿನ ಮುಖಂಡರುಗಳಾದ ರಾಜ ವಾಸುದೇವ ನಾಯಕ್ ವಕೀಲರು, ವೆಂಕಣ್ಣ ಯರಕಮಟ್ಟಿ, ಹಾಜಿಮಲ್ಲಿಕಅಹಮದ್ ಸಾಬ್ , ರಾಮಣ್ಣ ಉಪ್ಪಾರ್, ಬಾಬಾ ಮೆಡಿಕಲ್, ರಾಮನಗೌಡ ಮಾಲಿಪಾಟೀಲ್, ವಿನೋದ್ ಚಿಕ್ಕಲ್, ಮಾನಪ್ಪ ಕಾವಲಿ ಹೊಸೂರು, ಚನ್ನಬಸವ ಮ್ಯಾಕಲ ದೊಡ್ಡಿ, ಗೋವಿಂದಪ್ಪ ಆಲಗೇರಿ, ಕುರ್ಷಿದ್ ಪಟೇಲ್, ಮುದುರಂಗಪ್ಪ ವಟಾರ್, ರಂಗಪ್ಪ ತೊಗರಿ, ರಮೇಶ್ ಬಾಗೂರು ಸೇರಿದಂತೆ ಊರಿನ ಹಾಗೂ ಸುತ್ತಮುತ್ತಲಿನ ಗ್ರಾಮಸ್ಥರು ಹೆಚ್ಚಿನ ಸಂಖ್ಯೆಯಲ್ಲಿ ಹಾಜರಿದ್ದರು. ಈ ಸಂದರ್ಭದಲ್ಲಿ ಶ್ರೀ ಲಕ್ಷ್ಮಿ ರಂಗನಾಥ ಪೆಟ್ರೋಲಿಯಮ್ಸ್ ಜಾಲಹಳ್ಳಿ ಸಂಸ್ಥೆಯ ಮಾಲಕರಾದ ಸಿದ್ದಪ್ಪ ಗುಮೇದಾರ್ ಹಾಗೂ ಭೀಮಣ್ಣ ಗುಮೇದಾರ್ ಅವರು ಅತಿಥಿಗಳಿಗೆ ಸ್ವಾಗತಿಸಿ ಕೃತಜ್ಞತೆ ಸಲ್ಲಿಸಿದರು.

# ಸರ್ಕಾರಿ ಬಾಲಕರ ಪ್ರೌಢಶಾಲೆಯಲ್ಲಿ ವಿಜ್ಞಾನ ವಸ್ತು ಪ್ರದರ್ಶನ ನಾವಿನ್ಯತಾ ಮೇಳ..



ನೈಜ್ಯ ದೆಸೆ ನ್ಯೂಸ್

**ಸಿಂಧನೂರಿನ ಸರ್ಕಾರಿ ಬಾಲಕರ ಪ್ರೌಢಶಾಲೆಯಲ್ಲಿ ಮಾ.5ರಂದು ಗುರುವಾರ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನ ವತಿಯಿಂದ ನಾವೀನ್ಯತಾ ಮೇಳವನ್ನು ಅತ್ಯಂತ ವಿಜೃಂಭಣೆಯಿಂದ ಹಮ್ಮಿಕೊಳ್ಳಲಾಯಿತು. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳೇ ಸ್ವಯಂವಾಗಿ ತಯಾರಿಸಿದ 20ಕ್ಕೂ ಹೆಚ್ಚು ನವೀನ ವಿಜ್ಞಾನ ಮಾದರಿಗಳನ್ನು ಪ್ರದರ್ಶಿಸಿ, ತಮ್ಮ ಸೃಜನಾತ್ಮಕತೆ ಮತ್ತು ಸಮಸ್ಯೆ ಪರಿಹಾರ ಕೌಶಲ್ಯಗಳನ್ನು ಮೆರೆದರು.**

ಈ ಆವಿಷ್ಕಾರ ಮೇಳಕ್ಕೆ ಸುತ್ತಮುತ್ತಲಿನ ಶಾಲೆಗಳ ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಭೇಟಿ ನೀಡಿ, ವಿದ್ಯಾರ್ಥಿಗಳ ಮಾದರಿಗಳನ್ನು ವೀಕ್ಷಿಸಿ ಮೆಚ್ಚುಗೆ ವ್ಯಕ್ತಪಡಿಸಿದರು. ಮೇಳವು ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಚಿಂತನೆ ಮತ್ತು ಅನ್ವೇಷಣಾ ಮನೋಭಾವ ಬೆಳೆಸುವ ವೇದಿಕೆಯಾಗಿತ್ತು. ಈ ಕಾರ್ಯಕ್ರಮದಲ್ಲಿ ಶಾಲೆಯ ಪ್ರಭಾರಿ ಮುಖ್ಯಗುರು ರವೀಂದ್ರಗೌಡ ಮಾತನಾಡಿ, ಇಂದಿನ ದಿನಮಾನಗಳಲ್ಲಿ ಸಮಸ್ಯೆಗಳಿಗೆ ಪರಿಹಾರ ಕಂಡು ಹಿಡಿಯುವ ಕೌಶಲ್ಯಗಳು ಅತ್ಯಂತ ಅಗತ್ಯವಾಗಿವೆ. ಇಂತಹ ನಾವೀನ್ಯತಾ ಚಟುವಟಿಕೆಗಳ ಮೂಲಕ ಮಕ್ಕಳಲ್ಲಿ ಆ ಕೌಶಲ್ಯಗಳನ್ನು ವೃದ್ಧಿಸಲು ಶಿಕ್ಷಕರು ಪ್ರೇರೇಪಿಸಬೇಕು ಎಂದು ಹೇಳಿದರು.

ನಂತರ ಅಗಸ್ತ್ಯ ಅಂತರಾಷ್ಟ್ರೀಯ ಪ್ರತಿಷ್ಠಾನದ ರಾಯಚೂರು ಜಿಲ್ಲೆಯ ವಲಯ ಮುಖ್ಯಸ್ಥರಾದ ಜ್ಯೋತಿಬಾ ಸೂರ್ಯವಂಶಿ ಅವರು ಮಾತನಾಡಿ, ಪ್ರತಿಯೊಂದು ಮಾದರಿಯ ಸಾಧಕ-ಬಾಧಕಗಳನ್ನು ವಿವರಿಸಿ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ನೀಡಿದರು. ಈ ಕಾರ್ಯಕ್ರಮವನ್ನು ತಾಲೂಕು ಸಂಚಾಲಕರಾದ ಶಿವಗೇನಪ್ಪ ಕೊಮ್ಮನೂರು, ಗೌಡನಬಾವಿ ಅಚ್ಚುಕಟ್ಟಾಗಿ ಆಯೋಜಿಸಿದ್ದರು. ಈ ಸಂದರ್ಭದಲ್ಲಿ: ಶಾಲೆಯ ಶಿಕ್ಷಕರಾದ ರಾಮದಾಸ್, ತುಳಸಿದಾಸ್, ವೀರೇಶಪ್ಪ, ಅಂಜನಾದೇವಿ, ವಾಸಂತಿ ಕೆ.ಖಾಜಾ ಬನ್ನಿ, ರೇಷ್ಮಾ, ಚೆನ್ನವೀರಮ್ಮ, ಸೇರಿದಂತೆ ಇತರರು ಉಪಸ್ಥಿತರಿದ್ದರು.

# ತುಂಗಭದ್ರಾ ನೀರಾವರಿ ಕಾರ್ಮಿಕರ ಸಂಘದಿಂದ ಮಾ.7ರಂದು ನೀರಾವರಿ ಸಮಾವೇಶ: ಕೆ.ನಾಗಲಿಂಗಸ್ವಾಮಿ

ನೈಜ್ಯ ದೆಸೆ ನ್ಯೂಸ್

**ತುಂಗಭದ್ರಾ ನೀರಾವರಿ ಕಾರ್ಮಿಕರ ವಿವಿಧ ಬೇಡಿಕೆಗಳು ಈಡೇರಿಸಲು ಸರ್ಕಾರಕ್ಕೆ ಆಗ್ರಹಿಸಿ ರಾಯಚೂರು ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಮಾ.7ರಂದು ಹಕ್ಕೊತ್ತಾಯ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದು ಎಐಸಿಸಿಟಿಯು ಕೇಂದ್ರ ಸಮಿತಿ ಮುನಿರಬಾದ್ ಅಧ್ಯಕ್ಷ ಕೆ.ನಾಗಲಿಂಗಸ್ವಾಮಿ ಹೇಳಿದರು.**




ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಟಿಬಿ ಡ್ಯಾಂ ನೀರಾವರಿ ಯೋಜನೆ ರಾಜ್ಯದ ಬಹುದೊಡ್ಡ ನೀರಾವರಿ ಅಚ್ಚುಕಟ್ಟು ಪ್ರದೇಶವಾಗಿದೆ. ಕಲ್ಯಾಣ ಕರ್ನಾಟಕ ಭಾಗದ ರಾಯಚೂರು, ಕೊಪ್ಪಳ, ಬಳ್ಳಾರಿ, ಹಾಗೂ ವಿಜಯನಗರ ಜಿಲ್ಲೆಗಳ ರೈತರ ಜೀವನಾಡಿಯಾಗಿರುವ ಈ ಯೋಜನೆಯಂದ ಲಕ್ಷಾಂತರ ಎಕರೆ ಪ್ರದೇಶವು ನೀರಾವರಿಗೆ ಒಳಪಟ್ಟಿದೆ, ಕಳೆದ 25-30 ವರ್ಷಗಳಿಂದ ಅತ್ಯಂತ ಕಡಿಮೆ ಕೂಲಿಯಿಂದ ಕೆಲಸ ಮಾಡುತ್ತಾ, ಬಂದಿರುವ ಗ್ಯಾಂಗ್ ಮನ್, ವಾಚ್ ಮನ್, ಸವಡಿ, ಕಂಪ್ಯೂಟರ್ ಆಪರೇಟರ್, ಹೌಸ್ ಕೀಪಿಂಗ್, ಸೇರಿದಂತೆ ಇನ್ನಿತರೆ ಹುದ್ದೆಗಳಲ್ಲಿ ಕಾರ್ಮಿಕರು ಹಗಲು ರಾತ್ರಿ ಎನ್ನದೆ, ಕಲ್ಲು ಮುಳ್ಳು, ಹಾವು-ಚೇಳುಗಳನ್ನು ಲೆಕ್ಕಿಸದೆ, ತಮ್ಮ ಜೀವದ ಹಂಗನ್ನೂ ತೊರೆದು ರೈತರ ಜಮೀನುಗಳಿಗೆ ನೀರು ಹರಿಸುವ ಮಹತ್ವದ ಕೆಲಸ ಮಾಡುತ್ತಿದ್ದಾರೆ.

ಇಷ್ಟೆಲ್ಲಾ ಶ್ರಮಪಡುತ್ತಿದ್ದರು ಕೂಡ ಟಿಬಿ ಡ್ಯಾಂ ನೀರಾವರಿ ಕಾರ್ಮಿಕರಿಗೆ ಉದ್ಯೋಗದ ಭದ್ರತೆ ಇಲ್ಲದಂತಾಗಿದೆ. ಹಾಗಾಗಿ ಇದರ ಕುರಿತು ಚುನಾಯಿತ ಜನಪ್ರತಿನಿಧಿಗಳು ಹಾಗೂ ಸರ್ಕಾರವನ್ನು ಸಮಾವೇಶದ ಮೂಲಕ ಗಮನ ಸೆಳೆಯಲಾಗುತ್ತಿದೆ ಎಂದು ಹೇಳಿದರು. ಎಐಸಿಸಿಟಿಯು ರಾಜ್ಯ ಸಹ ಕಾರ್ಯದರ್ಶಿ ನಾಗರಾಜ ಪೂಜಾರ್ ಮಾತನಾಡಿ, ಗುತ್ತಿಗೆ ಪದ್ಧತಿಯನ್ನು ರದ್ದುಗೊಳಿಸಿ, ತುಂಗಭದ್ರಾ ನೀರಾವರಿ ಅಚ್ಚುಕಟ್ಟು ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರನ್ನು ಖಾಯಂಗೊಳಿಸಬೇಕು, ತುಂಗಭದ್ರಾ ನೀರಾವರಿ ಅಚ್ಚುಕಟ್ಟು ಪ್ರದೇಶದಲ್ಲಿ ಕೆಲಸ ಮಾಡುತ್ತಿರುವ ನೀರಾವರಿ ಕಾರ್ಮಿಕರಿಗೆ ಬದುಕುವ ವೇತನ ಇಪಿಎಫ್ ಮತ್ತು ಐಎಸ್‌ಐ ಪ್ರತಿ ತಿಂಗಳು ನಿಗದಿತ ಸಮಯಕ್ಕೆ ಪಾವತಿಸಬೇಕು,

ತುಂಗಭದ್ರಾ ಅಚ್ಚುಕಟ್ಟು ಪ್ರದೇಶದ ನೀರಾವರಿ ಕಾರ್ಮಿಕರಿಗೆ ಕೆಲಸದ ಪರಿಕರ, ಗುರುತಿನ ಚೀಟಿ, ಸಮವಸ್ತ್ರವು ಸೇರಿದಂತೆ ಮೂಲ ಸೌಕರ್ಯ ನೀಡಬೇಕು. ನೀರಾವರಿ ಕಾರ್ಮಿಕರ ಬಾಕಿ ವೇತನ, ಪಿಎಫ್ ಮತ್ತು ಇಎಸ್‌ಐ ಕೂಡಲೇ ಪಾವತಿಸಬೇಕು ಎಂದು ಸರ್ಕಾರಕ್ಕೆ ಆಗ್ರಹಿಸಲು ಸಮಾವೇಶವನ್ನು ಹಮ್ಮಿಕೊಳ್ಳಲಾಗಿದೆ ಎಂದರು. ಈ ವೇಳೆ: ಎಐಸಿಸಿಟಿಯು ಜಿಲ್ಲಾಧ್ಯಕ್ಷರಾದ ಅಜೀಜ್ ಜಾಗೀರದಾರ್, ಸಿಂಧನೂರು ವಿಭಾಗದ ಅಧ್ಯಕ್ಷ ವಾದಿರಾಜ್ ಕುಲಕರ್ಣಿ, ವೀರೇಶ ಸುಲ್ತಾನಪುರ, ಶರಣಪ್ಪ ಉದ್ಬಾಳ, ಮೊಹಮ್ಮದ್ ಸಾಬ್, ಸಬಾಸ್ಟೀನ್, ದೇವೇಂದ್ರ, ವೆಂಕಟೇಶ ತಿಮ್ಮಾಪುರ, ಹುಸೇನ್ ಸಾಬ್, ಸೇರಿದಂತೆ ಅನೇಕರಿದ್ದರು.

## ನೇಮಕಾತಿ ಪ್ರಕಟಣೆ

ರೈಲ್ವೆ ನೇಮಕಾತಿ ಮಂಡಳಿ (RRB) ಗ್ರೂಪ್ ಆ ಯ 22195 ಹುದ್ದೆಗಳಿಗೆ ನೇಮಕಾತಿ 2026. ITI, 10TH ಹೊಂದಿರುವ ಅಭ್ಯರ್ಥಿಗಳು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್ ಅರ್ಜಿಯು 20–02–2026 ರಂದು ಪ್ರಾರಂಭವಾಗುತ್ತದೆ ಮತ್ತು 09–03–2026 ರಂದು ಮುಕ್ತಾಯಗೊಳ್ಳುತ್ತದೆ. ಅಭ್ಯರ್ಥಿಯು RRB ವೆಬ್‌ಸೈಟ್, rrbchennai.gov.in ಮೂಲಕ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು. ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ 31.01.2026 (00:00 ಗಂಟೆಗಳು) ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 09.03.2026 (23:59 ಗಂಟೆಗಳು) ಅಧಿಕೃತ ವೆಬ್‌ಸೈಟ್ www.indianrailways.gov.in

1ನೇ ಪುಟದಿಂದ....

ಬದಲಾವಣೆಗಳಿಂದಾಗಿ ಭಾರತವು ಮತ್ತೆ ರಷ್ಯಾದತ್ತ ಮುಖ ಮಾಡುವ ಸಾಧ್ಯತೆಯಿದೆ. ಅಂತಾರಾಷ್ಟ್ರೀಯ ಮಾರುಕಟ್ಟೆಯಲ್ಲಿ ಬ್ರೆಂಟ್ ಕಚ್ಚಾ ತೈಲದ ಬೆಲೆ ಪ್ರತಿ ಬ್ಯಾರಲ್‌ಗೆ 80 ದಾಟಿದ್ದು, ಇದು ಭಾರತದ ಆಮದು ವೆಚ್ಚ ಮತ್ತು ಹಣದುಬ್ಬರದ ಮೇಲೆ ಪರಿಣಾಮ ಬೀರಬಹುದು ಎಂದು ಅಧಿಕಾರಿಗಳು ಆತಂಕ ವ್ಯಕ್ತಪಡಿಸಿದ್ದಾರೆ. ನಿಂತ ಹಡಗುಗಳು: ಈ ಹಡಗುಗಳು ಮುಖ್ಯವಾಗಿ ಪರ್ಷಿಯನ್ ಗಲ್?ಫ ಮತ್ತು ಗಲ್?ಫ ಆಫ್ ಓಮನ್ ಪ್ರದೇಶಗಳಲ್ಲಿ ನಿಂತಿವೆ. ಕೆಲವು ಹಡಗುಗಳು ಸರಕುಗಳನ್ನು ಲೋಡ್ ಮಾಡಲು ಕಾಯುತ್ತಿದ್ದರೆ, ಇನ್ನೂ ಕೆಲವು ಈಗಾಗಲೇ ಸಂಪೂರ್ಣವಾಗಿ ಸರಕುಗಳನ್ನು ತುಂಬಿಕೊಂಡಿವೆ. ಇಂತಹ ಪರಿಸ್ಥಿತಿಯಲ್ಲಿ ಹಡಗುಗಳು ಮುಂದೆ ಸಾಗುವುದಕ್ಕೂ, ಹಿಂದಿರುಗುವುದಕ್ಕೂ ಸಂಕಷ್ಟ ಎದುರಿಸುತ್ತಿವೆ. ಭಾರತದ ಸುಮಾರು 37 ಧ್ವಜ ಹಡಗುಗಳು ಈ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿವೆ. ಕೆಲವು ಹಡಗುಗಳು ಲೋಡ್ ಮಾಡಲು ಕಾಯುತ್ತಿದ್ದರೆ, ಇನ್ನೂ ಕೆಲವು ಲೋಡ್ ಸ್ಥಿತಿಯಲ್ಲಿವೆ. ಈ ಹಡಗುಗಳು ಹಾರ್ಮುಜ್ ಜಲಸಂಧಿಯ ಎರಡೂ ಬದಿಗಳಲ್ಲಿವೆ. ಅವುಗಳಲ್ಲಿ ಭಾರತೀಯ ನಾವಿಕರು ಸೇವೆ ಸಲ್ಲಿಸುತ್ತಿದ್ದಾರೆ. ಹೀಗಾಗಿ ಭಾರತೀಯ ಜೀವ, ಆಸ್ತಿ ಹಾಗೂ ದೇಶದ ಪೂರೈಕೆ ಸರಪಳಿಯನ್ನು ರಕ್ಷಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಲಾಗಿದೆ. ಹಾರ್ಮುಜ್ ಜಲಸಂಧಿ ಹಾರ್ಮುಜ್ ಜಲಸಂಧಿ ಜಾಗತಿಕ ತೈಲ ಸಾಗಣೆಗೆ ಅತ್ಯಂತ ಪ್ರಮುಖ ಮಾರ್ಗವಾಗಿದೆ. ಜಗತ್ತಿನ ದೊಡ್ಡ ಪ್ರಮಾಣದ ಕಚ್ಚಾ ತೈಲ ಸಾಗಣೆ ಈ ಕಿರಿದಾದ ಜಲಮಾರ್ಗದ ಮೂಲಕವೇ ಸಾಗುತ್ತದೆ. ಭಾರತಕ್ಕೂ ಈ ಮಾರ್ಗ ಬಹಳ ಮುಖ್ಯವಾಗಿದೆ. ವರದಿಗಳ ಪ್ರಕಾರ, ಭಾರತದ ಒಟ್ಟು ಕಚ್ಚಾ ತೈಲ ಆಮದುಗಳಲ್ಲಿ ಸುಮಾರು 46 ಶೇಕಡಾ ಭಾಗ ಹಾರ್ಮುಜ್ ಜಲಸಂಧಿಯ ಮೂಲಕ ಸಾಗುವ ಹಡಗುಗಳ ಮೇಲೆ ಅವಲಂಬಿತವಾಗಿದೆ.

## ವರ್ಲ್ಡ್ ಪ್ಯಾರಾ ಅಥ್ಲೆಟಿಕ್ ಗ್ರಾಂಡ್ ಪ್ರಿಕ್ಸ್ ಗೆ ಶಿವ.ಕೆ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ನ್ಯೂಡೆಲ್ಲಿಯಲ್ಲಿ ಮಾ.6 ರಿಂದ 14ರವರೆಗೆ ವರ್ಲ್ಡ್ ಪ್ಯಾರಾ ಅಥ್ಲೆಟಿಕ್ ಗ್ರಾಂಡ್ ಪ್ರಿಕ್ಸ್ ಗೆ ಸಿಂಧನೂರಿನ ಸರ್ಕಾರಿ ಪದವಿ ಮಹಾ ವಿದ್ಯಾಲಯದ ದೈಹಿಕ ಶಿಕ್ಷಣ ನಿರ್ದೇಶಕರಾದ ಶಿವ. ಕೆ ಅವರು, ಈ ಚಾಂಪಿಯನ್ ಶಿಪ್ ಗೆ ಇಂಟರ್–ನ್ಯಾಷನಲ್ ಟೆಕ್ನಿಕಲ್ ಅಫೀಶಿಯಲ್ ಆಗಿ ಆಯ್ಕೆಯಾಗಿದ್ದಾರೆ.**



ಎಂದು ಪ್ಯಾರಾ ಒಲಂಪಿಕ್ ಕಮಿಟಿ ಆಫ್ ಇಂಡಿಯಾದಿಂದ ಪತ್ರ ಬಂದಿದೆ ಎಂದು ಪ್ರಾಂಶುಪಾಲರು ತಿಳಿಸಿದರು. ಆಯ್ಕೆಯಾದ ದೈಹಿಕ ಶಿಕ್ಷಕ ಶಿವ.ಕೆ ಅವರಿಗೆ ಕಾಲೇಜು ಅಭಿವೃದ್ಧಿ ಸಂಸ್ಥೆಯ ಅಧ್ಯಕ್ಷರು, ಸದಸ್ಯರು, ಹಾಗೂ ಪ್ರಾಂಶುಪಾಲರು, ಭೋದಕ ಮತ್ತು ಬೋಧಕೇತರ ಸಿಬ್ಬಂದಿಗಳು, ವಿದ್ಯಾರ್ಥಿಗಳು ಅಭಿನಂದನೆಗಳನ್ನು ತಿಳಿಸಿದ್ದಾರೆ.

# ಜನಗಣತಿ 2027: ಮೂರು ದಿನಗಳ ತರಬೇತಿ ಕಾರ್ಯಾಗಾರಕ್ಕೆ ಚಾಲನೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜನಗಣತಿ–2027 ಹಿನ್ನೆಲೆಯಲ್ಲಿ ಜಿಲ್ಲಾಮಟ್ಟದ ಅಧಿಕಾರಿಗಳು, ಚಾರ್ಜ್ ಅಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗೆ 3 ದಿನಗಳ ತರಬೇತಿ ಕಾರ್ಯಾಗಾರವು ಮಾರ್ಚ 4ರಂದು ಆರಂಭವಾಯಿತು.**



ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ಕಾರ್ಯಗಾರಕ್ಕೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಈಶ್ವರ್ ಕಾಂದೂ ಅವರು ಚಾಲನೆ ನೀಡಿ ಮಾತನಾಡಿ, ಈ ಜನಗಣತಿಯು ಡಿಜಿಟಲ್ ಮೋಡನಲ್ಲಿ ನಡೆಯಲಿದೆ. ಇಲ್ಲಿ ಬರುವ ಪ್ರಶ್ನಾವಳಿಗಳನ್ನು ಸರಿಯಾಗಿ ಓದಿ ತಿಳಿದುಕೊಳ್ಳಬೇಕು. ಯಾವುದೇ ಗೊಂದಲಗಳಿದ್ದಲ್ಲಿ ಪರಿಹರಿಸಿಕೊಳ್ಳಬೇಕು. ಈ ಜನಗಣತಿ ಕಾರ್ಯವು ಸಂವಿಧಾನ ಬದ್ಧವಾದ ಕರ್ತವ್ಯ ಎಂದು ಭಾವಿಸಿ, ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಮಾರ್ಗಸೂಚಿಂಯನುಸಾರ ಜನಗಣತಿ ಪ್ರಕ್ರಿಯೆಯಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದರು.

ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಭಜಂತ್ರಿ ಅವರು ಮಾತನಾಡಿ, ಕರ್ನಾಟಕದಲ್ಲಿ ಜನಗಣತಿಯು ಒಟ್ಟು ಎರಡು ಹಂತಗಳಲ್ಲಿ ನಡೆಯಲಿದೆ. ಜನಗಣತಿ ನಿರ್ದೇಶನಾಲಯವು ನೀಡುವ ಯಾವುದೇ ಬಗೆಯ ಮಾರ್ಗಸೂಚಿಗಳನ್ನು ಜಿಲ್ಲಾ ಹಾಗೂ ತಾಲೂಕುಮಟ್ಟದ ಅಧಿಕಾರಿಗಳು ಮತ್ತು ಸಿಬ್ಬಂದಿ ಅರ್ಥೈಸಿಕೊಂಡು ಜನಗಣತಿ ಪ್ರಕ್ರಿಯೆಯಲ್ಲಿ ಶ್ರದ್ಧೆಯಿಂದ ಭಾಗಿಯಾಗಬೇಕು ಎಂದು ತಿಳಿಸಿದರು. ಜನಗಣತಿಯ ಹಿನ್ನೆಲೆ, ಜನಗಣತಿಯ ಪ್ರಕ್ರಿಯೆ, ಜನಗಣತಿಯ ವಿಧಾನಗಳು, ಜನಗಣತಿಯಲ್ಲಿ ಭಾಗಿಯಾಗುವ ಅಧಿಕಾರಿಗಳು ಮತ್ತು ಸಿಬ್ಬಂದಿ ಕರ್ತವ್ಯಗಳ ಬಗ್ಗೆ ತರಬೇತಿಯಲ್ಲಿ ಸಮಗ್ರ ವಿವರಿಸಲಾಯಿತು.

ತರಬೇತಿ ಕಾರ್ಯಗಾರದ ಉದ್ಘಾಟನಾ ಸಮಾರಂಭದಲ್ಲಿ ಲಿಂಗಸೂರ ಸಹಾಯಕ ಆಯುಕ್ತರಾದ ಬಸವಣೆಪ್ಪ ಕಲಶೆಟ್ಟಿ, ಜಿಲ್ಲಾ ಪಂಚಾಯತ್ ಮುಖ್ಯ ಯೋಜನಾಧಿಕಾರಿಗಳಾದ ಡಾ.ಟಿ.ರೋಣಿ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ, ಸಾಮಾಜಿಕ ಭದ್ರತೆ ಮತ್ತು ಪಿಂಚಣಿಯ ಸಹಾಯಕ ನಿರ್ದೇಶಕರಾದ ಬಸವರಾಜ ನಾಗರಬೆಂಚಿ ಹಾಗೂ ಇತರರು ಉಪಸ್ಥಿತರಿದ್ದರು. ಐಎಎಸ್ ಪ್ರೋಬೇಷನರಿ ಹಾಗೂ ತಹಸೀಲ್ದಾರರಾದ ಪುರುರಾಜ್ ಸಿಂಗ್ ಸೋಲಂಕಿ ಅವರು ಸ್ವಾಗತಿಸಿದರು.

ಶಿರಸ್ತೇದಾರ ಸೂಗುರೇಶ ದೇಸಾಯಿ ನಿರೂಪಿಸಿದರು. ತರಬೇತಿಯಲ್ಲಿ ಸಿಂಧನೂರ, ಮಾನವಿ, ಮಸ್ಕಿ, ಲಿಂಗಸಗೂರು, ದೇವದುರ್ಗ ಹಾಗೂ ಅರಕೇರಾ ತಹಸೀಲ್ದಾರರು, ದೇವದುರ್ಗ, ಮುದಗಲ್, ಲಿಂಗಸೂರ, ಮಾನವಿ ಮತ್ತು ಮಸ್ಕಿ ಪುರಸಭೆಗಳ ಮತ್ತು ತುರವಿಹಾಳ, ಹಟ್ಟಿ, ಬಳಗಾನೂರ, ಸಿರವಾರ, ಕವಿತಾಳ ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿಗಳು, ವಿಷಯ ನಿರ್ವಾಹಕರು ಹಾಗೂ ತಾಂತ್ರಿಕ ಸಹಾಯಕರು ಭಾಗಿಯಾಗಿದ್ದರು

# ವಿಜೃಂಭಣೆಯಿಂದ ಜರುಗಿದ ಶ್ರೀಅಮರೇಶ್ವರ ಮಹಾರಥೋತ್ಸವ



ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ಶ್ರೀ ಅಮರೇಶ್ವರ ಮಹಾರಥೋತ್ಸವ ವಿಜೃಂಭಣೆಯಿಂದ ಜರುಗಿ ತ್ತು. ಮೂಡಣ ದಿಕ್ಕಿನಲ್ಲಿ ಹೋಳಿ ಹುಣ್ಣಿಮೆಯ ಪೂರ್ಣಚಂದಿರ ಮೋಡ ಸರಿಸಿ ಹೊರಬರುತ್ತಿದ್ದಂತೆ, ಅತ್ತ ಪಡುವಣದಲ್ಲಿ ಬಾನ ಮರೆಗೆ ಭಾಸ್ಕರ ಸರಿಯುತ್ತಿರುವ ಸಂದರ್ಭ. ಲಕ್ಷಾಂತರ ಭಕ್ತ ಸಾಗರ ಭಕ್ತಿ–ಭಾವದಿಂದ ಶ್ರೀ ಅಮರೇಶ್ವರನ ತೇರು ಎಳೆಯುವ ಮೂಲಕ ಮಹಾರಥೋತ್ಸವದ ಸಂಭ್ರಮ ಇಮ್ಮಡಿ ಗೊಂಡಿತ್ತು.**


ಸಂಪ್ರದಾಯದಂತೆ ಗುರುಗುಂಟಾ ಸಂಸ್ಥಾನಿಕ ರಾಜಾ ಸೋಮನಾಥ ನಾಯಕರುರಥದ ಬಳಿ ಬಂದುರಥಕ್ಕೆ ಪೂಜೆ ಸಲ್ಲಿಸಿ, ಚಕ್ರಗಳಿಗೆ ಕಾಯಿ ಕರ್ಪುರ ಅರ್ಪಿಸಿದ ನಂತರ ಅಮರೇಶ್ವರ ಗುರು ಅಭಿನವ ಗಜದಂಡ ಶಿವಾಚಾರ್ಯರು ರಥಾರೂಢರಾಗುತ್ತಾರೆ. ನಂತರ ಭಕ್ತರು ಸಂಸ್ಥಾನಿಕರಿಗೆ ರಥೋತ್ಸವದ ಸಂಭ್ರಮ ಕಣ್ಣುಂಬಿಕೊಳ್ಳಲು ರಾಜ ನಿವಾಸಕ್ಕೆ ಬೀಳ್ಕೊಟ್ಟ ನಂತರ ರಥೋತ್ಸವ ಕಾರ್ಯಕ್ಕೆ ಚಾಲನೆ ನೀಡಲಾಯಿತು.

ಆವರಣದಲ್ಲಿರುವ ದೇವಸ್ಥಾನದ ರಥಬೀದಿಯಲ್ಲಿ ಸಂಜೆ ಸಾವಿರಾರು ಭಕ್ತರು ಬಸವೇಶ್ವರ ದೇವಸ್ಥಾನ (ಪಾದುಗಟ್ಟೆ)ವರೆಗೆ ರಥವನ್ನು ಎಳೆದು ಕೃತಾರ್ಥರಾದರು. ಗುಂತಗೋಳ ಸಂಸ್ಥಾನಿಕರಾದ ರಾಜಾ ಅಮರೇಶ್ವರ ನಾಯಕ, ರಾಜಾ ಶ್ರೀನಿವಾಸ ನಾಯಕ, ಶಾಸಕ ಮಾನಪ್ಪ ವಜ್ಜಲ್, ವಿಧಾನ ಪರಿಷತ್ ಸದಸ್ಯ ಶರಣಗೌಡ ಪಾಟೀಲ್ ಬಯ್ಯಾಪೂರ, ಮಾಜಿ ಸಚಿವ ಅಮರೇಗೌಡ ಪಾಟೀಲ್ ಬಯ್ಯಾಪೂರ, ಸಹಾಯಕ ಆಯುಕ್ತ ಬಸವಣ್ಣೆಪ್ಪ ಕಲಶೆಟ್ಟಿ, ಡಿವೈಎಸ್‌ಪಿ ದತ್ತಾತ್ರೇಯ ಕಾರ್ನಾಡ್, ಪಿಐ ಹೊಸಕೇರಪ್ಪ ಸೇರಿ ನಾನಾ ಪಕ್ಷಗಳ ಮುಖಂಡರು, ರೈತ ಮುಖಂಡರುಗಳು, ಪ್ರಗತಿಪರ ಸಂಘಟನೆ ಪದಾಧಿಕಾರಿಗಳು ಸೇರಿ ಸುತ್ತಮುತ್ತಲಿನ ತಾಲೂಕು, ಜಿಲ್ಲೆ ಹಾಗೂ ಹೊರರಾಜ್ಯಗಳಿಂದ ಬಂದ ಸದಸ್ರಾರು ಭಕ್ತ ಸಮೂಹ ಮಹಾರಥೋತ್ಸವವನ್ನು ಸಾಕ್ಷೀಕರಿಸಿದರು.

# ಪ್ರತಾಪಗೌಡರ ಬಗ್ಗೆ ಅಪಪ್ರಚಾರ ನಿಲ್ಲಿಸಿ, 2028ಕ್ಕೆ ಬಿಜೆಪಿ ಪಕ್ಷದಿಂದ ಸ್ಪರ್ಧಿಸಿ ಗೆಲ್ಲುವುದು ಖಚಿತ :ಮೌನೇಶ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ಕ್ಷೇತ್ರದ ಪ್ರತಿಯೊಂದು ಬೂತ್ ನಲ್ಲಿಯೂ ಪ್ರತಾಪಗೌಡ ಪಾಟೀಲರ ಅಭಿಮಾನಿಗಳು ಹಾಗೂ ಬಿಜೆಪಿ ಕಾರ್ಯಕರ್ತರಿದ್ದಾರೆ. ಬಿಜೆಪಿ ಪಕ್ಷ ಬಲಿಷ್ಠ ವಾಗಿರುವುದರಿಂದ ಮುಂದಿನ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್‌ನವರಿಗೆ ಸೋಲಿನ ಭಯ ಇರುವದರಿಂದ ಮಾಜಿ ಶಾಸಕ ಪ್ರತಾಪಗೌಡರ ಬಗ್ಗೆ ಇಲ್ಲಸಲ್ಲದ ಅಪಪ್ರಚಾರ ನಡೆಸಿದ್ದಾ ಮುಂಬರುವ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಪಕ್ಷದಿಂದ ಪ್ರತಾಪಗೌಡ ಪಾಟೀಲರು ಸ್ಪರ್ಧೆ ಮಾಡಿ ಗೆಲ್ಲುವುದು ಖಚಿತ ಎಂದು ಬಿಜೆಪಿ ಮಂಡಲ ಕಾರ್ಯದರ್ಶಿ ಮೌನೇಶ ರಾಥೋಡ್ ಹೇಳಿದರು.**




ಮಸ್ಕಿ ಪಟ್ಟಣದ ಪತ್ರಿಕಾ ಭವನದಲ್ಲಿ ಗುರುವಾರ ಜಂಟಿಯಾಗಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಬಿಜೆಪಿ ಮಂಡಲ ಕಾರ್ಯದರ್ಶಿ ಮೌನೇಶ ರಾಠೋಡ್ ಮತ್ತು ನಾಗರಾಜ ಪವಾರ ಶ್ರೀರಾಮುಲು ಅವರು ಬಿಜೆಪಿ ಪಕ್ಷದ ರಾಜ್ಯ ಪ್ರಭಾವಿ ನಾಯಕರು ಅವರು ಮಸ್ಕಿ ಕ್ಷೇತ್ರಕ್ಕೆ ಬರುತ್ತಾರೆಂದು ಇಲ್ಲ ಸಲ್ಲದ ಸುಳ್ಳು ಸುದ್ದಿಗಳನ್ನು ಹಬ್ಬಿಸಲಾಗುತ್ತಿದೆ 2028ರ ವಿಧಾನಸಭೆ ಚುನಾವಣೆಯಲ್ಲಿ ಮಸ್ಕಿ ಕ್ಷೇತ್ರದಿಂದ ಬಿಜೆಪಿ ಪಕ್ಷದ ವತಿಯಿಂದ ಪ್ರತಾಪ್ ಗೌಡ ಪಾಟೀಲ್ ಅವರೇ ಸ್ಪರ್ಧೆ ಮಾಡಿ ಗೆಲ್ಲಲಿದ್ದಾರೆ, ಇದರಲ್ಲಿ ಯಾವುದೇ ಅನುಮಾನ ಬೇಡ ಆದ್ದರಿಂದ ಇಲ್ಲಿನ ಬಿಜೆಪಿ ಪಕ್ಷದ ಕಾರ್ಯಕರ್ತರು ಗೊಂದಲಕ್ಕೆ ಈಡಾಗಬಾರದು.

ಕಳೆದ ನಾಲ್ಕೈದು ವರ್ಷಗಳಿಂದ ಕ್ಷೇತ್ರದಲ್ಲಿ ಯಾವೊಂದು ಅಭಿವೃದ್ಧಿ ಕೆಲಸ ಮಾಡಿಲ್ಲ. ವಿರೋಧ ಪಕ್ಷದ ನಾಯಕರ ಬಗ್ಗೆ ಕ್ಷೇತ್ರ ತುಂಬೆಲ್ಲಾ ಬರೀ ಹಸಿ ಸುಳ್ಳುಗಳನ್ನು ಹೇಳಿಕೊಂಡು ಓಡಾಡುತ್ತಿದ್ದು, ಪ್ರತಾಪಗೌಡ ಪಾಟೀಲ್ ಅವರ ಅವಧಿಯಲ್ಲಿ ಕ್ಷೇತ್ರ ಅಭಿವೃದ್ಧಿಯಾಗಿದೆ. ಆದ್ದರಿಂದ 2028ರ ಚುನಾವಣೆಯಲ್ಲಿ ಪ್ರತಾಪಗೌಡರನ್ನು ಎದುರಿಸಲಾಗದೆ. ಕ್ಷೇತ್ರಕ್ಕೆ ಬೇರೆ ಅವರು ಬರುತ್ತಾರೆ ಅಂತ ಬಿಜೆಪಿ ಮುಖಂಡರಲ್ಲಿ ಮತ್ತು ಕಾರ್ಯಕರ್ತರಲ್ಲಿ ಗೊಂದಲ ಸೃಷ್ಠಿ ಮಾಡಲು ಕಾಂಗ್ರೆಸ್ ಪಕ್ಷದವರು ಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು. ಪ್ರತಾಪಗೌಡರು ಬಿಟ್ಟರೇ ಬೇರೆ ಯಾರು ಮಸ್ಕಿ ಕ್ಷೇತ್ರಕ್ಕೆ ಬರಲ್ಲ. ಕಾರ್ಯಕರ್ತರು ಗೊಂದಲಕ್ಕಿಡಾಗಬಾರದು ಎಂದು ಹೇಳಿದರು. ಈ ಸಂದರ್ಭದಲ್ಲಿ ಕೃಷ್ಣ ರಾಠೋಡ್, ಸುರೇಶ ಪತ್ತಾರ ಇದ್ದರು.

# ಒಳಮೀಸಲಾತಿ ಜಾರಿಗೆ ಆಗ್ರಹಿಸಿ ಪ್ರತಿಭಟನೆ

ನೈಜ್ಯ ದೆಸೆ ನ್ಯೂಸ್

**ಲಿಂಗಸಗೂರು: ರಾಜ್ಯ ಸರ್ಕಾರ 56 ಸಾವಿರ ಹುದ್ದೆಗಳ ಭರ್ತಿ ಮುಂದಾಗಿದ್ದು, ಹುದ್ದೆಗಳ ಭರ್ತಿಯಲ್ಲಿ ಒಳಮೀಸಲಾತಿಯ ಅನ್ವಯ ಹುದ್ದೆಗಳನ್ನು ಭರ್ತಿ ಮಾಡಬೇಕೆಂದು ಆಗ್ರಹಿಸಿ ಒಳ ಮೀಸಲಾತಿ ಹೋರಾಟ ಸಮಿತಿ ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಸಹಾಯಕ ಆಯುಕ್ತರ ಮೂಲಕ ಮಾನ್ಯ ಮುಖ್ಯಮಂತ್ರಿಯವರಿಗೆ ಮನವಿಯನ್ನು ಸಲ್ಲಿಸಲಾಯಿತು.**




ಒಳ ಮೀಸಲಾತಿ ವಿಧೇಯಕವು ರಾಜ್ಯಪಾಲರ ಸಹಿ ಪಡೆದು ಅನುಮೋದನೆಗೊಂಡಿದೆ ಎಂದು ಸಂತೋಷ ಪಡುವ ಸಂದರ್ಭದಲ್ಲಿ ಒಳ ಮೀಸಲಾತಿ ಅನ್ವಯವಾಗದಂತೆ 56 ಸಾವಿರ ಹುದ್ದೆಗಳನ್ನು ಭರ್ತಿ ಮಾಡುತ್ತೇವೆ ಎಂಬ ಮಾರ್ಚ್ 16ರ ಸಚಿವ ಸಂಪುಟದ ತೀರ್ಮಾನ ಸಂವಿಧಾನ ಮತ್ತು ಸಾಮಾಜಿಕ ನ್ಯಾಯಕ್ಕೆ ಬಗೆದ ಘೋರ ಅನ್ಯಾಯವಾಗಿದೆ. ಆ ಮೂಲಕ 35 ವರ್ಷಗಳ ಒಳ ಮೀಸಲಾತಿ ಹೋರಾಟಕ್ಕೆ ಮಹಾದ್ರೋಹ ಎಸಗಲಾಗಿದೆ. ಸರ್ಕಾರದ ಈ ತೀರ್ಮಾನವನ್ನು ಒಳ ಮೀಸಲಾತಿ ಹೋರಾಟಗಾರರು, ಸಾಮಾಜಿಕ ನ್ಯಾಯದ ಪರವಿರುವ ಪ್ರಜ್ಞಾವಂತರೆಲ್ಲರೂ ಒಕ್ಕೊರಲಿನಿಂದ ಉಗ್ರವಾಗಿ ಖಂಡಿಸುತ್ತೇವೆ.

ಚುನಾವಣೆ ಪೂರ್ವದಲ್ಲಿ ಸರ್ಕಾರ ಬಂದ ಮೊದಲನೇ ಅಧಿವೇಶನದಲ್ಲಿಯೇ ಒಳ ಮೀಸಲಾತಿಯನ್ನು ನಮ್ಮ ಸರ್ಕಾರ ಜಾರಿಗೊಳಿಸುತ್ತದೆ ಎಂದು ಪ್ರಣಾಳಿಕೆಯಲ್ಲಿ ಕಾಂಗ್ರೆಸ್ ಘೋಷಿಸಿತ್ತು. ಚಿತ್ರದುರ್ಗ ಸಮಾವೇಶದಲ್ಲಿಯೂ ಅದೇ ಭರವಸೆ ನೀಡಲಾಗಿತ್ತು. ಒಳ ಮೀಸಲಾತಿಯನ್ನು ಜಾರಿಗೊಳಿಸುವ ಸರ್ಕಾರ ಬಂದು 2 ವರ್ಷ ಮುಗಿಯುತ್ತಿದ್ದರೂ ಒಳಮೀಸಲಾತಿ ಅನ್ವಯ 56 ಸಾವಿರ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಪ್ರತಿಭಟನೆ. ಪ್ರಾಮಾಣಿಕ ಪ್ರಯತ್ನ ನಡೆಸಲಿಲ್ಲ. ಅಂತಿಮವಾಗಿ ಸುಪ್ರೀಂ ಕೋರ್ಟಿನ ತೀರ್ಪಿನ ನಂತರ ಹೋರಾಟದ ಒತ್ತಡಕ್ಕೆ ಮಣಿದು ಸಚಿವ ಸಂಪುಟದಲ್ಲಿ ಒಳ ಮೀಸಲಾತಿ ಜಾರಿಗೆ ತರುತ್ತೇವೆಂದು ತಾತ್ವಿಕವಾಗಿ ಒಪ್ಪಿಕೊಂಡು 25 ಆಗಸ್ಟ್ 2025 ರಂದು ಆದೇಶ ಹೊರಡಿಸಿದಿರಿ. 2025ರ ಚಳಿಗಾಲದ ಅಧಿವೇಶನದಲ್ಲಿ ಶಾಸನ ಬದ್ದ ಕಾಯ್ದೆ ಮಾಡಿಕೊಂಡು ರಾಜ್ಯಪಾಲರಿಂದ ಅಂತಿಮ ಅಂಗೀಕಾರ ಪಡೆಯಲಾಗಿದೆ. ಇಷ್ಟೆಲ್ಲ ಇದ್ದರೂ ಒಳ ಮೀಸಲಾತಿ ಇಲ್ಲದೇ ನೇಮಕಾತಿಗಳನ್ನು ಭರ್ತಿ ಮಾಡುವಂತೆ ಸಚಿವ ಸಂಪುಟ ತೀರ್ಮಾನ ತೆಗೆದುಕೊಳ್ಳುವುದು ಸರ್ಕಾರಕ್ಕೆ ಆತ್ಮಸಾಕ್ಷಿ ಇಲ್ಲ ಎಂಬುದನ್ನು ಸಾರುತ್ತದೆ.

ಭಾರತದ ಹಲವಾರು ರಾಜ್ಯದಲ್ಲಿ ಪ.ಜಾತಿ/ಪ.ಪಂಗಡ ಸಮುದಾಯಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ಸಂವಿಧಾನಬದ್ದವಾಗಿ ಮಿಸಲಾತಿ ಪ್ರಮಾಣ ಹೆಚ್ಚಿಸಿ ಅನುಷ್ಠಾನ ಗೊಳಿಸಲಾಗಿದೆ. ಆದರೆ ಕರ್ನಾಟಕದಲ್ಲಿ ದಿನಾಂಕ 28.12.2022ರಿಂದ ಜಾರಿಗೆ ಬಂದ ಪ.ಜಾ 17% ಮತ್ತು ಪ.ಪಂ 7% ಮಿಸಲು ಪ್ರಮಾಣ ಹೆಚ್ಚಳದಂತೆ ಉದ್ಯೋಗಗಳನ್ನು ನೀಡದೆ ಪರಿಶಿಷ್ಟ ಜಾತಿಗೆ 2% ಕಡಿತ ಎಂದರೆ 1129 ಮತ್ತು ಪರಿಶಿಷ್ಟ ಪಂಗಡಕ್ಕೆ 4% ಕಡಿತ ಎಂದರೆ 2,258 ಒಟ್ಟು ಪ.ಜಾ–ಪ.ಪ ದಲಿತ ಸಮುದಾಯಕ್ಕೆ ಸಿಗಬೇಕಾದ 3387ಕ್ಕು ಹೆಚ್ಚಿನ ಹುದ್ದೆಗಳನ್ನು ತಪ್ಪಿಸಿ 56,432ಹುದ್ದೆಗಳ ಭರ್ತಿಗೆ ಮುಂದಾದ ಪರಿಶಿಷ್ಟ ಜಾತಿಗಳ ವಿರೋಧಿ ನೀತಿಯ ಆದೇಶ ಹಿಂಪಡೆಯಬೇಕು ಎಂದು ಒತ್ತಾಯಿಸುತ್ತೇವೆ.

ಪರಿಶಿಷ್ಟರ ಮೀಸಲಾತಿ ಹೆಚ್ಚಳದಿಂದ 56% ಮೀಸಲಾತಿಯನ್ನು ಕೋರ್ಟ್‌ನಲ್ಲಿ ಪ್ರಶ್ನಿಸಲಾಗಿದೆ. ಆದರೆ ಅರ್ಜಿದಾರರ ಪರ ವಕೀಲರು ಅದಕ್ಕೆ ತಡೆ ನೀಡುವಂತೆ ವಾದ ಮಂಡಿಸಿರುವುದಿಲ್ಲ ಮತ್ತು ನ್ಯಾಯಾಲಯವು ತಡೆಯಾಜ್ಞೆ ನೀಡಿಲ್ಲ. ಹಾಗಾಗಿ 56% ನಂತೆ ನೇರ ನೇಮಕಾತಿ ಮಾಡಿಕೊಳ್ಳಲು ನ್ಯಾಯಾಲವು ತಡೆಯಾಜ್ಞೆ ನೀಡಿದೆ ಎಂಬುದು ಸತ್ಯಕ್ಕೆ ದೂರವಾದ ಮಾತಾಗಿದೆ. ಆದರೂ ಸರ್ಕಾರ ದಿಕ್ಕು ತಪ್ಪಿಸುತ್ತಿರುವುದು ಮಹಾ ಅನ್ಯಾಯವಾಗಿದೆ. ಸದಾ ಸಂವಿಧಾನ, ಬಾಬಾ ಸಾಹೇಬರೆಂದು ಬಾಯಿ ಬಡಿದುಕೊಳ್ಳುವ ಈ ಸರ್ಕಾರ ನೀತಿಯಲ್ಲಿ ಮಾತ್ರ ಸಾಮಾಜಿಕ ನ್ಯಾಯಕ್ಕೆ ವಿರೋಧವಾಗಿ ನಡೆದುಕೊಂಡಿದೆ. ಸುಪ್ರೀಂ ಕೋರ್ಟ್‌ನ ತೀರ್ಪಿನಂತೆ ಒಳಮೀಸಲಾತಿ ಜಾರಿಗೊಳಿಸಬೇಕಾದ ಸಮಾಜ ಕಲ್ಯಾಣ ಇಲಾಖೆಯ ಸಚಿವರೇ ಒಳಮೀಸಲಾತಿಗೆ ಅಡ್ಡಲಾಗಿ ನಿಂತಿದ್ದಾರೆ. ಎಲ್ಲಾ ಪರಿಶಿಷ್ಟರಿಗೆ ಸಾಮಾಜಿಕ ನ್ಯಾಯ ಒದಗಿಸುವ ಬದಲು ಸದಾ ಪಕ್ಷಪಾತಿಯಾಗಿ ನಡೆದುಕೊಳ್ಳುತ್ತಾ ಬಂದಿದ್ದಾರೆ.




ಹಾಗಾಗಿ ಇಡೀ ಅಧಿಕಾರಿ ವರ್ಗ ಒಳಮೀಸಲಾತಿ ವಿಫಲಗೊಳಿಸಲು ಕೆಲಸ ಮಾಡುತ್ತಿದೆ. ಈ ಅನ್ಯಾಯಗಳನ್ನು ಇನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ. ಹಾಗಾಗಿ ಪ್ರಜ್ಞಾವಂತರು ಮತ್ತು ಸಮುದಾಯ ಮಾಡು ಇಲ್ಲವೇ ಮಡಿ ಎಂಬ ಅಂತಿಮ ಹೋರಾಟಕ್ಕೆ ಕರೆ ನೀಡುತ್ತಿದೆ. ಮಾರ್ಚ್ 12ರಂದು ಬೆಂಗಳೂರಿನಲ್ಲಿ ಬೃಹತ್ ಪ್ರತಿಭಟನೆ ನಡೆಸಿ ಸರ್ಕಾರಕ್ಕೆ ಬುದ್ದಿ ಕಲಿಸಲು ಮುಂದಾಗಿದ್ದೇವೆ. ನಮ್ಮ ಅಳಿವು–ಉಳಿವಿನ ಈ ನಿರ್ಣಾಯಕ ಹೋರಾಟದಲ್ಲಿ ತಾವೆಲ್ಲರೂ ತಪ್ಪದೇ ಜೊತೆಗೂಡಬೇಕೆಂದು ಆಗ್ರಹಿಸುತ್ತೇವೆ. ಒಳ ಮೀಸಲಾತಿಯನ್ನು ತಪ್ಪಿಸುವ ಹುನ್ನಾರದಿಂದ ತರಾತುರಿಯಲ್ಲಿ ಹೊರಡಿಸಿರುವ ಸರ್ಕಾರದ ಆದೇಶ ಸಂಖ್ಯೆ ಸಿಆ ಸುಇ–1ಸೇಹಿಮ 2026, ದಿನಾಂಕ 27.02.2026 ಅನ್ನು ತಕ್ಷಣವೆ ಹಿಂಪಡೆಯಬೇಕು ಮತ್ತು ನೇಮಕಾತಿಯಲ್ಲಿ ಒಳಮೀಸಲಾತಿ ಕಡ್ಡಾಯಗೊಳಿಸಿ ಜಾರಿಗೆ ತರಬೇಕು.

ರಾಜ್ಯದಲ್ಲಿ ದಲಿತರ ಜನಸಂಖ್ಯೆ 18%ನಷ್ಟಿದೆ. ಹಾಗಾಗಿಯೇ ನಿವೃತ್ತ ನ್ಯಾಯಮೂರ್ತಿ ನಾಗಮೋಹನ್‌ದಾಸ್‌ರವರು 17%ಗೆ ಪರಿಶಿಷ್ಟ ಜಾತಿಗಳ ಮೀಸಲಾತಿ ಹೆಚ್ಚಿಸಲು ಶಿಫಾರಸ್ಸು ಮಾಡಿರುತ್ತಾರೆ ಮತ್ತು ಅದು ಜಾರಿಯಲ್ಲಿದೆ. ಈ ಸಾಮಾಜಿಕ ನ್ಯಾಯದ ನೀತಿಯನ್ನು ನ್ಯಾಯಾಂಗೀಯ ಸವಾಲುಗಳಿಂದ ರಕ್ಷಿಸಲು ರಾಜ್ಯದ 56% ಮೀಸಲಾತಿ ಸಂರಕ್ಷಣೆಗಾಗಿ ಕೇಂದ್ರ ಸರ್ಕಾರಕ್ಕೆ ಶಿಫಾರಸ್ಸು ಮಾಡಿ, ಸರ್ವ ಪಕ್ಷಗಳ ನಿಯೋಗದೊಂದಿಗೆ ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡಿ, ಸಂವಿಧಾನದ 9ನೇ ಅನುಸೂಚಿಯಲ್ಲಿ ಸೇರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು.

ನೇಮಕಾತಿಗಳಲ್ಲಿ ವಿಶ್ವವಿದ್ಯಾಲಯಗಳು ಒಂದು ಘಟಕ ಎಂದು ಪರಿಗಣಿಸಬೇಕೆನ್ನುವ ಪ್ರಸ್ತಾವನೆಯನ್ನು ಕೈಬಿಡಬೇಕು. ಅಲೆಮಾರಿ ಸಮುದಾಯಗಳಿಗೆ 1% ಪ್ರತ್ಯೇಕ ಮೀಸಲಾತಿ ನೀಡಲೇಬೇಕೆಂದು ಆಗ್ರಹಿಸಿದ ಸಹಾಯಕ ಆಯುಕ್ತರ ಮೂಲಕ ಮುಖ್ಯಮಂತ್ರಿಗಳಿಗೆ ಮನವಿ ಸಲ್ಲಿಸಿದರು. ಪಾಮಯ್ಯ ಮುರಾರಿ, ಹೆಚ್.ಮುರಾರಿ, ಡಿ.ಬಿ.ಸೋಮನಮರಡಿ, ಹನುಮಂತಪ್ಪ ವೆಂಕಟಾಪುರ, ಹನುಮಂತಪ್ಪ ಕುಣೆಕೆಲ್ಲೂರು, ಗ್ಯಾನಪ್ಪ ಕಟ್ಟಿಮನಿ, ರುದ್ರಪ್ಪ ಬ್ಯಾಗಿ, ಶರಣಪ್ಪ ಕಟ್ಟಿಮನಿ, ಉಮೇಶ ಐಹೋಳರ, ಗ್ಯಾನಪ್ಪ ನಿವೃತ್ತ ಶಿಕ್ಷಕರು, ಹುಸೇನಪ್ಪ ಕಳ್ಳಿಲಿಂಗಸುಗೂರು, ಮೋಹನ್ ಗೋಸೆ, ವಿಜಯ ಪೋಳ್, ರಮೇಶ ಗೋಸೆ, ದುರಗಪ್ಪ ಅಗ್ರಹಾರ, ಅಮರೇಶ ವೆಂಕಟಾಪೂರ, ಆಂಜಿನೇಯ ಭಂಡಾರಿ, ಮೌನೇಶ ಐದನಾಳ, ಶಿವರೆಡ್ಡಿ ಆಸ್ಕಿಹಾಳ, ಹುಸೇನಪ್ಪ ಯರಡೋಣಾ ಸೇರಿ ಕಾರ್ಯಕರ್ತರು ಇದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ


### ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್

ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (EEE) (Electrical and Electronics Engineering) 3 ವರ್ಷಗಳ ಡಿಪ್ಲೊಮಾ ಅಥವಾ 4 ವರ್ಷಗಳ ಬಿ.ಇ./ಬಿ.ಟೆಕ್ ಕೋರ್ಸ್ ಆಗಿದೆ. ಇದು ವಿದ್ಯುತ್ ಉತ್ಪಾದನೆ, ವಿತರಣೆ, ಯಂತ್ರಗಳು, ಸರ್ಕ್ಯೂಟ್‌ಗಳು ಮತ್ತು ಎಲೆಕ್ಟ್ರಾನಿಕ್ ಸಾಧನಗಳ ವಿನ್ಯಾಸದ ಮೇಲೆ ಕೇಂದ್ರೀಕರಿಸುತ್ತದೆ. ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ಸ್ ಸಾಮಾನ್ಯವಾಗಿ ವಿದ್ಯುತ್ ಶಕ್ತಿ ಉತ್ಪಾದನೆ, ಪ್ರಸರಣ ಮತ್ತು ವಿತರಣೆಯ ಅಧ್ಯಯನದೊಂದಿಗೆ ವ್ಯವಹರಿಸುತ್ತದೆ. ವಿದ್ಯುತ್ ಸರ್ಕ್ಯೂಟ್‌ಗಳು ಮತ್ತು ವಿದ್ಯುತ್ಕಾಂತೀಯತೆಯ ಪರಿಕಲ್ಪನೆಗಳನ್ನು ವಿದ್ಯುತ್ ವ್ಯವಸ್ಥೆಯ ಜಾಲಗಳಲ್ಲಿ ಉದ್ಭವಿಸಿದ ಸಂಕೀರ್ಣ ಸಮಸ್ಯೆಗಳನ್ನು ವಿಶ್ಲೇಷಿಸಲು ಅನ್ವಯಿಸಲಾಗುತ್ತದೆ. ಈ ಕ್ಷೇತ್ರದ ಮೂಲವು 19 ನೇ ಶತಮಾನದ ಉತ್ತರಾರ್ಧದಲ್ಲಿ ವಿದ್ಯುತ್ ಟೆಲಿಗ್ರಾಫ್ ಅನ್ನು ಮೊದಲು ವಾಣಿಜ್ಯೀಕರಣಗೊಳಿಸಿದಾಗ, ದೂರವಾಣಿಯನ್ನು ಕಂಡುಹಿಡಿಯಲಾಯಿತು ಮತ್ತು ವಿದ್ಯುತ್ ಶಕ್ತಿ ವಿತರಣೆ ಬಳಕೆಗೆ ಬಂದಿತು. ಅಂತೆಯೇ, ವಿದ್ಯುತ್ ಮತ್ತು ಎಲೆಕ್ಟ್ರಾನಿಕ್ ಎಂಜಿನಿಯರಿಂಗ್ ವಿದ್ಯುತ್ ವ್ಯವಸ್ಥೆಗಳು ಮತ್ತು ವಿದ್ಯುತ್ ಯಂತ್ರಗಳ ನಿಯಂತ್ರಣ ಮತ್ತು ಕಾರ್ಯಾಚರಣೆಯಲ್ಲಿನ ಅನೇಕ ನೈಜ-ಸಮಯದ ಸಮಸ್ಯೆಗಳನ್ನು ನಿಭಾಯಿಸುವಲ್ಲಿ ಸಂಬಂಧಿಸಿದೆ. ಈ ಕ್ಷೇತ್ರವು ಸಂವೇದನೆ ಮತ್ತು ಸ್ವಾಧೀನದಿಂದ ಹಿಡಿದು ಸಂವಹನ, ನೆಟ್‌ವರ್ಕಿಂಗ್, ಸ್ವಿಚಿಂಗ್, ಸಂಸ್ಕರಣೆ ಮತ್ತು ಸಂಗ್ರಹಣೆಯ ಮೂಲಕ ಮಾಹಿತಿಯನ್ನು ನಿರ್ವಹಿಸುವ ಪ್ರತಿಯೊಂದು ಅಂಶವನ್ನು ವ್ಯಾಪಿಸಿದೆ. ಇಂಧನ, ಆಟೋಮೋಟಿವ್, ಮತ್ತು ಉತ್ಪಾದನಾ ಕ್ಷೇತ್ರಗಳಲ್ಲಿ, ವಿಶೇಷವಾಗಿ ಇವಿ (EV) ತಂತ್ರಜ್ಞಾನದಲ್ಲಿ, ಬೃಹತ್ ಉದ್ಯೋಗಾವಕಾಶಗಳನ್ನು ಈ ಕ್ಷೇತ್ರವು ನೀಡುತ್ತದೆ. ಕೋರ್ಸ್ ವಿವರಗಳು (Course Details in Kannada): ಕೋರ್ಸ್ ಹೆಸರು: ಡಿಪ್ಲೊಮಾ/ಬಿ.ಇ. – ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ (EEE). ಅವಧಿ: 3 ವರ್ಷಗಳು (ಡಿಪ್ಲೊಮಾ) ಅಥವಾ 4 ವರ್ಷಗಳು (ಬಿ.ಇ./ಬಿ.ಟೆಕ್). ಅರ್ಹತೆ: 10ನೇ ತರಗತಿ (ಡಿಪ್ಲೊಮಾಗೆ) ಅಥವಾ 12ನೇ ತರಗತಿ (PCME-ಬಿ.ಇ.ಗೆ). ಮುಖ್ಯ ವಿಷಯಗಳು (Subjects): ಸರ್ಕ್ಯೂಟ್ ವಿಶ್ಲೇಷಣೆ, ಎಲೆಕ್ಟ್ರಿಕಲ್ ಯಂತ್ರಗಳು (Transformers/Generators), ಪವರ್ ಎಲೆಕ್ಟ್ರಾನಿಕ್ಸ್, ನಿಯಂತ್ರಣ ವ್ಯವಸ್ಥೆಗಳು (Control Systems), ಡಿಜಿಟಲ್ ಸಿಸ್ಟಮ್ ವಿನ್ಯಾಸ. ಕೌಶಲ್ಯಗಳು: ವಿದ್ಯುತ್ ಉಪಕರಣಗಳ ಸ್ಥಾಪನೆ, ನಿರ್ವಹಣೆ, ಟ್ರಬಲ್‌ಶೂಟಿಂಗ್, ಮತ್ತು ಸಾಫ್ಟ್‌ವೇರ್ ಆಧಾರಿತ ವಿನ್ಯಾಸ. ಉದ್ಯೋಗಾವಕಾಶಗಳು (Job Scope): ಸರ್ಕಾರಿ ವಲಯ: KPTCL, BESCOM, BHEL, ರೈಲ್ವೆ, ಪವರ್ ಪ್ಲಾಂಟ್‌ಗಳು. ಖಾಸಗಿ ವಲಯ: ವಿದ್ಯುತ್ ಉತ್ಪಾದನಾ ಕಂಪನಿಗಳು, ಉತ್ಪಾದನಾ ಘಟಕಗಳು, ಎಲೆಕ್ಟ್ರಾನಿಕ್ಸ್ ಕೈಗಾರಿಕೆಗಳು. ವಿಶೇಷ ಕ್ಷೇತ್ರಗಳು: ಎಲೆಕ್ಟ್ರಿಕ್ ವಾಹನಗಳು (EV), ಸೌರಶಕ್ತಿ (Solar), ಆಟೊಮೇಷನ್ ಮತ್ತು ರೋಬೋಟಿಕ್ಸ್.

## ಜೆಎಸ್‌ಎಸ್ ವಿದ್ಯಾರ್ಥಿಗಳ ಉತ್ತಮ ಸಾಧನೆ.

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬ್ಯಾಲಾಳ ಕ್ರಾಸ್ ನಲ್ಲಿರುವ ಜೆಎಸ್‌ಎಸ್ ಪ್ರಾಥಮಿಕ ಹಾಗೂ ಪ್ರೌಢಶಾಲೆ ಕೊಡಗಾನೂರ ಈ ಶಾಲೆಯ ವಿದ್ಯಾರ್ಥಿಗಳು ಪ್ರತಿ ವರ್ಷದಂತೆ ಈ ವರ್ಷ ಸೈನಿಕ ಪ್ರವೇಶ ಪರೀಕ್ಷೆಯಲ್ಲಿ ಉತ್ತಮವಾಗಿ ಸಾಧನೆ ಮಾಡುವುದರ ಮೂಲಕ ತಮ್ಮ ಶಾಲೆಯ ಪ್ರಖ್ಯಾತಿಯನ್ನು ಹೆಚ್ಚಿಸಿದ್ದಾರೆ.**




ದಿನಾಂಕ18/01/2026 ರಂದು ನಡೆದ ಅಖಿಲ ಭಾರತ ಸೈನಿಕ ಶಾಲೆಯ ಪ್ರವೇಶ ಪರೀಕ್ಷೆಯಲ್ಲಿ ಪರೀಕ್ಷೆ ಬರೆದ 39 ವಿದ್ಯಾರ್ಥಿಗಳು ಉತ್ತೀರ್ಣರಾಗುದರ ಮೂಲಕ ಉತ್ತಮ ಸಾಧನೆ ಮಾಡಿರುತ್ತಾರೆ. ಅವರಲ್ಲಿ ಅಭಿಷೇಕ್ ಮಂಗಳೂರು 270/300. ಸಿದ್ದಾರ್ಥ್ ಕೋಳೂರು 259/300. ಶಿವಲೀಲಾ ಬ್ಯಾಕೋಡ 259/300. ಅಂಕವನ್ನು ಪಡೆದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ. ಸತತ 13 ವರ್ಷಗಳಿಂದ ಜೆ ಎಸ್ ಎಸ್ ಶಾಲೆಯು ನವೋದಯ ಸೈನಿಕ ಸೇರಿದಂತೆ ವಿವಿಧ ಸ್ಪರ್ಧಾತ್ಮಕ ಶಾಲೆಗಳಿಗೆ ಆಯ್ಕೆ ಮಾಡುವುದರ ಮೂಲಕ ತಾಲೂಕಿನಲ್ಲಿಯೇ ಪ್ರಖ್ಯಾತಿ ಪಡೆದಿದೆ .13 ವರ್ಷಗಳಿಂದ ಸುಮಾರು 344 ವಿದ್ಯಾರ್ಥಿಗಳು ವಿವಿಧ ಸೈನಿಕ ಶಾಲೆಗಳಿಗೆ ಆಯ್ಕೆಯಾಗಿರುತ್ತಾರೆ. ಈ ವರ್ಷ ಪರೀಕ್ಷೆ ಬರೆದು ಉತ್ತೀರ್ಣರಾದ ಎಲ್ಲ ವಿದ್ಯಾರ್ಥಿಗಳಿಗೂ ಜೆ ಎಸ್ ಎಸ್ ಶಾಲೆಯ ಕಾರ್ಯದರ್ಶಿಗಳಾದ ಶ್ರೀ ಸಾಹೇಬಗೌಡ ಗಬಸಾವಳಗಿ ಅವರು ಅಭಿನಂದನೆ ಸಲ್ಲಿಸಿದ್ದಾರೆ.

# ಬೊಮ್ಮನಹಳ್ಳಿ ಪಿಕೆಪಿಎಸ್ ಅಧ್ಯಕ್ಷ–ಉಪಾಧ್ಯಕ್ಷರ ಅವಿರೋಧ ಆಯ್ಕೆ

ನೈಜ್ಯ ದೆಸೆ ನ್ಯೂಸ್

**ತಾಳಿಕೋಟಿ: ತಾಲೂಕಿನ ಬೊಮ್ಮನಹಳ್ಳಿ ಗ್ರಾಮದ ವಿವಿಧೋದ್ದೇಶ ಪ್ರಾಥಮಿಕ ಗ್ರಾಮೀಣ ಕೃಷಿ ಸಹಕಾರ ಸಂಘ ಇದರ ಆಡಳಿತ ಮಂಡಳಿಯ ಅಧ್ಯಕ್ಷ ಹಾಗೂ ಉಪಾಧ್ಯಕ್ಷರ ಸ್ಥಾನಕ್ಕೆ ಗುರುವಾರ ನಡೆದ ಚುನಾವಣೆಯಲ್ಲಿ ಮಡಿವಾಳಪ್ಪ (ಮಡುಸೌಕಾರ) ಅಮರಪ್ಪ ಬಿರಾದಾರ ಅಧ್ಯಕ್ಷರಾಗಿ, ಮಾದೇವಿ ಪ್ರಭುಗೌಡ ಪಾಟೀಲ(ಗುತ್ತಿಹಾಳ) ಉಪಾಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾದರು.**



ಸಹಕಾರ ಸಂಘದ ಕಾರ್ಯಾಲಯದಲ್ಲಿ ನಡೆದ ಸದರಿ ಚುನಾವಣೆಯಲ್ಲಿ ಸಂಘದ ಆಡಳಿತ ಮಂಡಳಿಯ ಒಟ್ಟು 12 ಸದಸ್ಯರಲ್ಲಿ 9 ಸದಸ್ಯರು ಚುನಾವಣಾ ಪ್ರಕ್ರಿಯೆಯಲ್ಲಿ ಭಾಗವಹಿಸಿದ್ದರು.3 ಜನ ಸದಸ್ಯರು ಚುನಾವಣೆಗೆ ಗೈರು ಹಾಜರಾಗಿದ್ದರು. ಅಧ್ಯಕ್ಷ ಸ್ಥಾನಕ್ಕೆ ಮಡಿವಾಳಪ್ಪ ಅಮರಪ್ಪ ಬಿರಾದಾರ ಹಾಗೂ ಉಪಾಧ್ಯಕ್ಷ ಸ್ಥಾನಕ್ಕೆ ಮಾದೇವಿ ಪ್ರಭುಗೌಡ ಪಾಟೀಲ ಇವರಿಬ್ಬರನ್ನು ಹೊರತುಪಡಿಸಿ ಬೇರೆ ಯಾರೂ ನಾಮಪತ್ರ ಸಲ್ಲಿಸದೇ ಇರುವುದರಿಂದ ಇವರಿಬ್ಬರೂ ಅವಿರೋಧವಾಗಿ ಆಯ್ಕೆಯಾಗಿದ್ದಾರೆಂದು ಚುನಾವಣಾ ಅಧಿಕಾರಿಯೂ ಆದ ಸಹಕಾರ ಅಭಿವೃದ್ಧಿ ಅಧಿಕಾರಿ ವಿಜಯಕುಮಾರ ಉತ್ನಾಳ ಘೋಷಿಸಿದರು. ಸಂಘದ ಮುಖ್ಯ ಕಾರ್ಯನಿರ್ವಾಹಕ ಎಸ್.ಬಿ.ಬಿರಾದಾರ ಸಹಾಯಕರಾಗಿ ಕಾರ್ಯನಿರ್ವಹಿಸಿದರು. ವಿಜಯೋತ್ಸವ: ಆರಂಭದಿಂದಲೂ ತೀವ್ರ ಹಣಾಹಣಿಗೆ ಕಾರಣವಾದ ಈ ಚುನಾವಣೆಯಲ್ಲಿ ಅಧ್ಯಕ್ಷ ಹಾಗೂ ಉಪಾಧ್ಯಕ್ಷರು ಅವಿರೋಧವಾಗಿ ಆಯ್ಕೆಯಾಗಿರುವುದಕ್ಕೆ ಅಧ್ಯಕ್ಷ ಮಡಿವಾಳಪ್ಪ ಬಿರಾದಾರ ಹಾಗೂ ಮಾದೇವಿ ಪಾಟೀಲ ಅವರ ಅಪಾರ ಬೆಂಬಲಿಗರು, ಮುಖಂಡರು ಹಾಗೂ ಅಭಿಮಾನಿಗಳು ಪಟಾಕಿ ಸಿಡಿಸಿ, ಗುಲಾಲು ಎರಚಿ, ಸಿಹಿ ವಿತರಿಸಿ ಸಂಭ್ರಮಿಸಿದರು. ಈ ಸಂದರ್ಭದಲ್ಲಿ ನೂತನ ಅಧ್ಯಕ್ಷ ಮಡಿವಾಳಪ್ಪ (ಮಡುಸೌಕಾರ) ಬಿರಾದಾರ ಅವರು ಮಾತನಾಡಿ ನಮ್ಮಿಬ್ಬರ ಅವಿರೋಧ ಆಯ್ಕೆಗೆ ಸಹಕರಿಸಿದ ಎಲ್ಲ ಸದಸ್ಯರಿಗೆ ಮುಖಂಡರಿಗೆ ಹಾಗೂ ಕಾರ್ಯಕರ್ತರಿಗೆ ಕೃತಜ್ಞತೆ ಸಲ್ಲಿಸುತ್ತೇನೆ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಸಂಘದ ಅಭಿವೃದ್ಧಿಗಾಗಿ ಕೆಲಸ ಮಾಡುತ್ತೇವೆ ಎಂದರು.

ಈ ಸಮಯದಲ್ಲಿ ಸಂಘದ ಆಡಳಿತ ಮಂಡಳಿಯ ನೂತನ ಸದಸ್ಯರಾದ ಮಾಳಪ್ಪ ಅಮಲ್ಯಾಳ, ಸಂಗನಗೌಡ ಪಾಟೀಲ, ಚಿದಾನಂದ ಬಿರಾದಾರ, ಬಾಬುಗೌಡ ಪಾಟೀಲ, ಯಮನಪ್ಪ ಹರಿಜನ, ಇರಸಂಗಪ್ಪ ದೋಳೆಕಾರ, ಸಿದ್ದಪ್ಪ ಕಟ್ಟಿಮನಿ ಹಾಗೂ ಮುಖಂಡರಾದ ಭೀಮನಗೌಡ ತಂಗಡಗಿ, ಜೈಭೀಮ ಮುತ್ತಗಿ, ಜಗನ್ನಾಥ ಮಸರಕಲ್ಲ,ನಿಂಗನಗೌಡ ಬಿರಾದಾರ,ಮೂಸಾ ಕಾಚಾಪೂರ, ಕುಮಾರಗೌಡ ಪಾಟೀಲ, ಪ್ರಪುಲ್ ಮುರಬಾಗಿ ಮತ್ತಿತರರು ಇದ್ದರು.

# ಸಂವಿಧಾನದ ಮೌಲ್ಯಗಳನ್ನು ಎತ್ತಿ ಹಿಡಿಯುವುದು ಪ್ರತಿಯೊಬ್ಬರ ಆದ್ಯ ಕರ್ತವ್ಯ: ಡಾ. ಬಸವರಾಜ ಕರಡಿಗುಡ್ಡ




ನೈಜ್ಯ ದೆಸೆ ನ್ಯೂಸ್

**ಮಾನ್ವಿ: ತಾಲೂಕಿನ ಕರಡಿ ಗುಡ್ಡ ಗ್ರಾಮದಲ್ಲಿ ವೆಂಕಟೇಶ್ವರ ಪದವಿ ಮಹಾವಿದ್ಯಾಲಯದ ವತಿಯಿಂದ ಹಮ್ಮಿಕೊಂಡಿದ್ದ ರಾಷ್ಟ್ರೀಯ ಸೇವಾ ಯೋಜನೆಯ ವಾರ್ಷಿಕ ಶಿಬಿರದ ಎರಡನೇ ದಿನದ ವಿಶೇಷ ಉಪನ್ಯಾಸ ಕಾರ್ಯಕ್ರಮವನ್ನು ಉದ್ದೇಶಿ ಮಾತನಾಡಿದ ವಿಶೇಷ ಉಪನ್ಯಾಸಕರಾದ ಡಾ. ಬಸವರಾಜ್ ಕರಡಿಗುಡ್ಡ ಇವರು ಸಂವಿಧಾನದ ಮೌಲ್ಯಗಳನ್ನು,**

ತತ್ವಗಳನ್ನು, ಆಶಯಗಳನ್ನು ಎತ್ತಿ ಹಿಡಿಯುವುದು ಭಾರತೀಯ ಪ್ರಜೆಯ ಪ್ರತಿಯೊಬ್ಬರ ಆದ್ಯ ಕರ್ತವ್ಯ. ಜೊತೆಗೆ ಸಂವಿಧಾನವು ಪ್ರಸ್ತಾವನೆಯಲ್ಲಿ ತಿಳಿಸಿದಂತೆ ಪ್ರತಿಯೊಬ್ಬರಿಗೂ ಸಾಮಾಜಿಕ, ಆರ್ಥಿಕ, ರಾಜಕೀಯ ನ್ಯಾಯ, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ ಮನೋಭಾವನೆ, ಬೆಳೆಸಿಕೊಂಡು ವಿಚಾರ, ಅಭಿವ್ಯಕ್ತಿ ಸ್ವಾತಂತ್ರದ ಜೊತೆಗೆ ಮಹಿಳೆಯರ ಸ್ಥಾನಮಾನಕ್ಕೆ ಧಕ್ಕೆ ಉಂಟಾಗದ ರೀತಿಯಲ್ಲಿ ಸಂವಿಧಾನದ ಆಶಯಗಳನ್ನು ಗೌರವಿಸಿ ಬದುಕುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಭಾರತದ ಪ್ರತಿಯೊಬ್ಬ ಪ್ರಜೆಗಳು ತಮ್ಮದೇ ರೀತಿಯ ಹಕ್ಕು ಮತ್ತು ಕರ್ತವ್ಯಗಳನ್ನ ಬಳಸಿಕೊಂಡು ಸಂವಿಧಾನದ ಚೌಕಟ್ಟಿನೊಳಗೆ ಕಾನೂನು ರೀತಿಯಲ್ಲಿ ಸಹಕಾರ, ಸಹಬಾಳ್ವೆ ತತ್ವದ ಅಡಿಯಲ್ಲಿ ಜೀವನ ರೂಪಿಸಿಕೊಳ್ಳಬೇಕೆಂದು ತಿಳಿಸಿದರು.

ಜೊತೆಗೆ ಶಿಬಿರಾರ್ಥಿಗಳು ಇತ್ತೀಚಿಗೆ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿ ಕಡೆ ಹೆಚ್ಚು ಒಲವು ಕೊಟ್ಟು ಸರಕಾರಿ ಹುದ್ದೆಯನ್ನು ಪಡೆಯುವ ನಿಟ್ಟಿನಲ್ಲಿ ಸತತ ಪರಿಶ್ರಮ ,ನಿರಂತರ ಅಭ್ಯಾಸದ ಕಡೆ ಗಮನ ಹರಿಸಬೇಕೆಂದು ತಿಳಿಸಿದರು.ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡು ಮಾತನಾಡಿದ ಚಂದ್ರಶೇಖರ್ ಹೆಳವರ ರವರು ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು ಸಮಯಪ್ರಜ್ಞೆ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕೆಂದು ತಿಳಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕಾಲೇಜಿನ ಪ್ರಾಚಾರ್ಯರಾದ ಶಂಕ್ರಪ್ಪ ಅಂಗಡಿ, ಉಪನ್ಯಾಸಕರಾದ ಕುಮಾರಿ ಆಫ್ರಿನ್ ಬೇಗಂ ಶ್ರೀಮತಿ ಶೈಲಜಾ ,ಶರಣಬಸವ ಕರಡಿ ಗುಡ್ಡ ಹಾಗೂ ಸಹ ಶಿಕ್ಷಕರಾದ ಗೋಪಾಲ್ ನಾಯಕ್ ಜೂಕೂರು ಅತಿಥಿ ಶಿಕ್ಷಕರಾದ ಶ್ರೀಮತಿ ಸುಮಲತಾ, ಶ್ರೀಮತಿ ಇನಾಕ್ಷಿ ಹಾಗೂ ಕಾರ್ಯಕ್ರಮದ ನಿರೂಪಣೆಯನ್ನು ಶಿಬಿರಾರ್ಥಿ ಈಶ್ವರಮ್ಮ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಕಾಲೇಜಿನ ಸಿಬ್ಬಂದಿಗಳು ಮತ್ತು ಎನ್.ಎಸ್.ಎಸ್ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಬಿಸಿಲಿನ ಪ್ರಖರತೆ, ಜಿಲ್ಲೆಯ ಜನತೆಯು ಆರೋಗ್ಯದ ದೃಷ್ಟಿಯಿಂದ ಅಗತ್ಯ ಕಾಳಜಿ ವಹಿಸಲು ಮನವಿ.

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಪ್ರಸಕ್ತ ವರ್ಷ ಬಿಸಿಲಿನ ತಾಪಮಾನವು ಹೆಚ್ಚಾಗುವ ಬಗ್ಗೆ ಭಾರತೀಯ ಹವಮಾನ ಇಲಾಖೆಯ ನಿರಂತರ ಮುನ್ಸೂಚನೆ ನೀಡುತ್ತಿದ್ದು, ಕಡು ಬಿಸಿಲಿನಿಂದ ಆರೋಗ್ಯದ ಮೇಲೆ ಬೀರುವ ದುಷ್ಪರಿಣಾಮ ಹಾಗೂ ಅವುಗಳ ಮುಂಜಾಗ್ರತಾ ಕ್ರಮಗಳ ಬಗ್ಗೆ ಸಾರ್ವಜನಿಕರು ಹೆಚ್ಚಿನ ಕಾಳಜಿ ವಹಿಸಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಸುರೇಂದ್ರ ಬಾಬು ಮನವಿ ಮಾಡಿದ್ದಾರೆ.**




ಬಿಸಿಲಿನ ತಾಪಮಾನದಿಂದ ರಕ್ಷಿಸಿಕೊಳ್ಳಲು ಮತ್ತು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗಾದಾಗ ತಕ್ಷಣ ಕೈಗೊಳ್ಳಬೇಕಾದ ಮುಂಜಾಗೃತೆ ಬಗ್ಗೆ ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರದ ನಿರ್ದೇಶನ ಹಾಗೂ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮದ ಮಾರ್ಗದರ್ಶನದಂತೆ ಈ ಕೆಳಕಂಡಂತೆ ಜಾಗೃತಿ ವಹಿಸಲು ವಿನಂತಿಸಿದ್ದಾರೆ.

ಏನು ಮಾಡಬೇಕು: ಮನೆಯ ಹೊರಗೆ ಹೋಗುವಾಗ ಸಡಿಲವಾದ, ತೆಳು ಬಣ್ಣದ ಹತ್ತಿಯ ಬಟ್ಟೆ ಧರಿಸಬೇಕು. ಜೋತೆಯಲ್ಲಿ ಕುಡಿಯುವ ನೀರನ್ನು ಇಟ್ಟುಕೊಳ್ಳುವುದು. ನಿರಂತರವಾಗಿ ನೀರು, ಮಜ್ಜಿಗೆ, ಎಳೆನೀರು ಕುಡಿಯಬಹುದು. ಹಣ್ಣಿನ ರಸ, ಪಾನಕಗಳನ್ನು ಕುಡಿಯಬಹುದು. ಅಲ್ಲದೆ ಓಆರ್‌ಎಸ್ ಜೀವಜಲ ತಯಾರಿಸಿ ಕುಡಿಯಬೇಕು.

ಕರವಸ್ತ್ರ, ಟಿಶ್ಯು ಪೇಪರ್‌ನಿಂದ ಬೆವರನ್ನು ಒರೆಸಿಕೊಳ್ಳಬೇಕು. ನಿರ್ಜಲಿಕರಣವೆನಿಸಿದರೆ ಧಾರಾಳವಾಗಿ ಉಪ್ಪು, ಸಕ್ಕರೆ ಮಿಶ್ರಿತ ನೀರನ್ನು ಕುಡಿಯಿರಿ. ಆದಷ್ಟು ಮಸಾಲೆ ರಹಿತ, ಶುದ್ದ ಆಹಾರ ಸೇವಿಸಬೇಕು. ಗಾಳಿಯಾಡುವಂತಹ ಪಾದರಕ್ಷೆ ಧರಿಸಿರಿ ಎಂದು ತಿಳಿಸಿದ್ದಾರೆ. ಬಿಸಿಲಿನಲ್ಲಿ ಅಸ್ವಸ್ಥತೆ ಕಂಡುಬಂದರೆ: ಯಾರಾದರೂ ಬಿಸಿಲಿನ ಪ್ರಕರತೆಯಿಂದ ತೊದಲು ಮಾತು ಅಥವಾ ಅರ್ಥರಹಿತವಾಗಿ ಬಡಬಡಿಸಿದ್ದಲ್ಲಿ, ಕೂಡಲೇ ನೆರಳಿನ ಪ್ರದೇಶಕ್ಕೆ ಸ್ಥಳಾಂತರಿಸಿರಿ. ತಕ್ಷಣ ಕೆಳಗೆ ಮಲಗಿಸಿ ಕಾಲುಗಳನ್ನು ಮೇಲಕೆತ್ತಿ ಆರೈಕೆ ಮಾಡಿ. ಆತ/ಆಕೆಯ ಹಣೆ, ಕತ್ತು, ಪಾದ ತೊಡೆಯ ಸಂದುಗಳನ್ನು ಒದ್ದೆ ಬಟ್ಟೆಯಿಂದ ಒರೆಸಿರಿ (ತಂಪಾದ ಅಥವಾ ಐಸ್ ನೀರಿನಿಂದ ಒರೆಸಬೇಡಿ) ಚರ್ಮ ಕೆಂಪಾದರೆ, ಬೆವರು ಕಡಿಮೆಯಾದರೆ, ದೇಹದ ಉಷ್ಣತೆ ಜಾಸ್ತಿಯಾದರೆ, ದೀರ್ಘವಾದ ತೀವ್ರ ಉಸಿರಾಟವಿದ್ದಲ್ಲಿ ತುರ್ತಾಗಿ ವೈದ್ಯರನ್ನು ಸಂಪರ್ಕಿಸಬೇಕು.

ಏನು ಮಾಡಬಾರದು: ಬಿಗಿಯಾದ, ಗಾಢ ಬಣ್ಣದ, ಸಿಂಥೆಟಿಕ್ ಬಟ್ಟೆ ಧರಿಸಬಾರದು. ಕುಷನ್‌ಯುಕ್ತ ಕುರ್ಚಿಯಲ್ಲಿ ಸತತವಾಗಿ ಕೂಡಬಾರದು. ಸೋಡಾ ಇತ್ಯಾದಿ ಕಾರ್ಬೋನೇಟೆಡ್ ತಂಪು ಪಾನಿಯಗಳನ್ನು ಕುಡಿಯಬೇಡಿ ( ಬಾಯಾರಿಕೆಯಾದಾಗ ಕಡ್ಡಾಯವಾಗಿ ನೀರು ಕುಡಿಯಬೇಕು). ಬೆವರನ್ನು ಒರೆಸಲು ಒರಟಾದ ಬಟ್ಟೆಯನ್ನು ಉಪಯೋಗಿಸಬೇಡಿ. ಕಾಫಿ, ಟೀ, ಅತಿ ಸಕ್ಕರೆ ಅಂಶವುಳ್ಳ ಪಾನೀಯ ಅತಿಯಾಗಿ ಸೇವಿಸಬಾರದು. ಬಿಸಿಯಾದ ಮಸಾಲೆಯುಕ್ತ ಆಹಾರ ತಿನ್ನಬಾರದು. ಮಾಂಸಹಾರ ಸೇವನೆ ಮತ್ತು ಮದ್ಯಪಾನ ವರ್ಜಿಸಬೇಕು. ಬಿಗಿಯಾದ ಗಾಳಿಯಾಡದ ಪಾದರಕ್ಷೆ ಅಥವಾ ಶೂ ಧರಿಸಬೇಡಿ. ಉಷ್ಣತೆಯಿಂದ ಸುಸ್ತಾದಾಗ ತುಂಬಾ ತಣ್ಣಗಿನ ಅಥವಾ ಶೀತಲೀಕರಿಸಿದ ನೀರಿನಿಂದ ಒರೆಸಿಕೊಳ್ಳಬೇಡಿ (ಇದರಿಂದ ದೇಹದ ಹೊರ ಪದರದಲ್ಲಿನ ರಕ್ತನಾಳಗಳು ಸಂಕುಚಿತಗೊಂಡು ದೇಹದ ಒಳಗಿನ ಉಷ್ಣತೆ ದೇಹದೊಳಗೆ ಬಂಧಿತವಾಗಿ ಅಂಗಾಂಗಗಳು ನಿಷ್ಕ್ರಿಯಗೊಂಡು ಹೆಚ್ಚಿನ ಹಾನಿಯಾಗುವ ಸಂಭವವಿರುತ್ತದೆ) ಎಂದು ತಿಳಿಸಿದ್ದಾರೆ.

ಶಾಖಾಘಾತದ ಲಕ್ಷಣಗಳು: ಅತಿಹೆಚ್ಚು ಬಿಸಿಲಿನ ತಾಪಮಾನದಿಂದ ಶಾಖಾಘಾತಕ್ಕೆ ಒಳಗಾಗುವ ಸಂಭವವಿರುತ್ತದೆ. ಅದರಲ್ಲಿ ಮುಖ್ಯವಾಗಿ ಸಂಭ್ರಾಂತಿ, ಸ್ಪಷ್ಟವಿಲ್ಲದ ಮಾತು, ಅರೆಪ್ರಜ್ಞೆ ಶಾಖಾಘಾತದ ಲಕ್ಷಣಗಳಾಗಿವೆ. ಶಾಖಾಘಾತಕ್ಕೆ ಚಿಕಿತ್ಸೆ: ಮನುಷ್ಯನು ಬಿಸಿಲಿನ ಬೇಗೆಯಿಂದ ಶಾಖಾಘಾತಕ್ಕೊಳಗದಾಗ ನೆರಳಿರುವೆಡೆಗೆ ಸ್ಥಳಾಂತರಿಸಬೇಕು. ವ್ಯಕ್ತಿಯ ವಸ್ತ್ರಗಳನ್ನು ಸಡಿಲಗೊಳಿಸಿ ಅಂಗಾತ ಮಲಗಿಸಿಬೇಕು. ಕಾಲುಗಳನ್ನು ಎತ್ತರಿಸಿ, ಸಾಮಾನ್ಯ ನೀರಿನಿಂದ ದೇಹವನ್ನು ಒರೆಸಬೇಕು. ಅತಿ ಅಗತ್ಯವೆನಿಸಿದರೆ ಹತ್ತಿರದ ವೈದ್ಯರ ಬಳಿ ತಕ್ಷಣವೇ ಕರೆದುಕೊಂಡು ಹೋಗಬೇಕು.

ಈಗಾಗಲೆ ಬೇಸಿಗೆ ಮುಂಜಾಗ್ರತೆಗಾಗಿ ಹವಮಾನ ಬದಲಾವಣೆ ಮತ್ತು ಮಾನವ ಆರೋಗ್ಯ ಕಾರ್ಯಕ್ರಮ ಅಧಿಕಾರಿ ಡಾ ಶಿವಕುಮಾರ್ ನಾರಾ ರವರ ನೇತೃತ್ವದಲ್ಲಿ ಜಿಲ್ಲೆಯಲ್ಲಿ ಆರೋಗ್ಯ ಇಲಾಖೆಯ ಸಿಬ್ಬಂದಿಗಳಿಗೆ ಹಾಗೂ ಆಶಾ ಕಾರ್ಯಕರ್ತೆಯರಿಗೆ ತರಬೇತಿ ನೀಡಿ ಜನತೆಗೆ ಜಾಗೃತಿ ನೀಡಲು ಕ್ರಮ ವಹಿಸಲಾಗುತ್ತಿದೆಯೆಂದು ಎಂದು ತಿಳಿಸಿದರು.

ವಾಂತಿ ಬೇಧಿ ತಡೆ: ಬೇಸಿಗೆಯಲ್ಲಿ ಕಲುಷಿತ ನೀರಿನ ಸೇವನೆಯಿಂದ ಸಂಭಾವ್ಯ ವಾಂತಿ–ಬೇಧಿ ಪ್ರಕರಣಗಳು ಉಂಟಾಗುವ ಹಿನ್ನಲೆಯಲ್ಲಿ ಶುದ್ದೀಕರಿಸಿದ ನೀರು ಅಥವಾ ನೀರು ಶುದ್ದೀಕರಣ ಘಟಕದ ನೀರನ್ನು ಕುಡಿಯಲು ಬಳಸಬೇಕು. ಅಲ್ಲದೆ ಊಟದ ಮೊದಲು ಶೌಚದ ನಂತರ ಕೈಗಳನ್ನು ಸಾಬೂನು ಮತ್ತು ನೀರಿನಿಂದ 45 ಸೆಕೆಂಡ್‌ಗಳ ಕಾಲ ತೊಳೆದ ನಂತರ ಆಹಾರ ಸೇವಿಸಬೇಕು. ನೀರಿನ ಸಂಗ್ರಹಣಗಳ ಮೇಲೆ ತಪ್ಪದೇ ಮುಚ್ಚಳ ಮುಚ್ಚಬೇಕು. ಸುರಕ್ಷಿತ ಆಹಾರ ಮಾತ್ರ ಸೇವಿಸಿ, ಆದಷ್ಟು ಮನೆಯಲ್ಲಿ ತಯಾರಿಸಿದ ಆಹಾರಕ್ಕೆ ಆದ್ಯತೆ ನೀಡಿರಿ, ರಸ್ತೆ ಬದಿ ತೆರೆದಿಟ್ಟ ಆಹಾರ ಪದಾರ್ಥ ಸೇವಿಸಬಾರದು, ಮಲ, ಮೂತ್ರ ವಿಸರ್ಜನೆಗಾಗಿ ಶೌಚಾಲಯ ಬಳಸಬೇಕು. ಇದಕ್ಕಾಗಿ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ ಗಣೇಶ್ ಕೆ ನೇತೃತ್ವದಲ್ಲಿ ಅಗತ್ಯ ಜಾಗೃತಿ ನೀಡಲಾಗುತ್ತಿದೆ ಎಂದರು. ಅಲ್ಲದೆ ಯಾವುದೇ ತುರ್ತು ವಾಹನಕ್ಕಾಗಿ (ಆ?ಯಂಬ್ಯುಲೆನ್ಸ್) 108 ಕ್ಕೆ ಕರೆ ಮಾಡಿ ಸದಯಪಯೋಗ ಪಡೆಯಲು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ ಸುರೇಂದ್ರ ಬಾಬು ಪ್ರಕಟಣೆಯ ಮೂಲಕ ಮನವಿ ಮಾಡಿದ್ದಾರೆ.

# ಜಿಲ್ಲಾಧಿಕಾರಿ, ಜಿ.ಪಂ ಸಿಇಓ ಅವರಿಗೆ ಮನವಿ ಮಾರ್ಚ್ 11 ರಿಂದ ಸರ್ಕಾರಿ ವೈದ್ಯಾಧಿಕಾರಿಗಳಿಂದ ಅನಿರ್ದಿಷ್ಟಾವಧಿ ಮುಷ್ಕರ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಕರ್ನಾಟಕ ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ನೌಕರರ ಕೇಂದ್ರ ಸಂಘದ ಆದೇಶದ ಮೇರೆಗೆ ಆರೋಗ್ಯ ಇಲಾಖೆಯ ಅಧಿಕಾರಿ ಮತ್ತು ನೌಕರರ ನ್ಯಾಯಯುತ ಬೇಡಿಕೆಗಳ ಈಡೇರಿಕೆಗಾಗಿ ಆಗ್ರಹಿಸಿ ಮಾರ್ಚ್ 11 ರಿಂದ ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿ ಕೊಳ್ಳಲಾಗಿದೆ ಎಂದು ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ (ರಿ), ಕರ್ನಾಟಕ ರಾಜ್ಯ ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಇಲಾಖಾ ನೌಕರರ ಕೇಂದ್ರ ಸಂಘ (ರಿ) ಹಾಗೂ ಇಲಾಖೆಯ ಎಲ್ಲಾ ವೃಂದ ಸಂಘಟನೆಯ ವತಿಯಿಂದ ಮುಷ್ಕರದ ಭಾಗವಾಗಿ ಮಾನ್ಯ ಜಿಲ್ಲಾಧಿಕಾರಿಗಳು ಹಾಗೂ ಮಾನ್ಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ ರಾಯಚೂರುರವರಿಗೆ ಲಿಖಿತ ಮನವಿ ಪತ್ರವನ್ನು ಸಲ್ಲಿಸಲಾಯಿತು.**



ಮೊದಲನೇ ಹಂತವಾಗಿ ದಿನಾಂಕ 11–03–2026 ರಿಂದ 15–03–2026ರವರೆಗೆ ಕಪ್ಪುಪಟ್ಟಿ ಧರಿಸಿ ಹೊರರೋಗಿ ಸೇವೆ ನೀಡದೇ ಕೇವಲ ತುರ್ತು ಸೇವೆ ಒದಗಿಸಲಾಗುವುದು, ಎರಡನೇ ಹಂತದಲ್ಲಿ ದಿನಾಂಕ: 16/03/2026 ರಿಂದ ಬೇಡಿಕೆ ಈಡೇರುವವರೆಗೂ ಜಿಲ್ಲೆಯ ಆರೋಗ್ಯ ಇಲಾಖೆಯ ಎಲ್ಲಾ ವೈದ್ಯರು, ಅಧಿಕಾರಿ ನೌಕರರು ಕರ್ತವ್ಯಕ್ಕೆ ಅನಿರ್ದಿಷ್ಟಾವಧಿವರೆಗೆ ಗೈರುಹಾಜರಾಗುವದಾಗಿ ತಿಳಿಸಿದರು. ಬೇಡಿಕೆಗಳು: ರಾಜ್ಯದ ಎಲ್ಲಾ ಸರ್ಕಾರಿ ಆಸ್ಪತ್ರೆಗಳಿಗೆ ಕಾಲಕಾಲಕ್ಕೆ ಸಮರ್ಪಕವಾಗಿ ಇಲಾಖೆಯಿಂದ ಔಷಧಿಗಳನ್ನು ಸರಬರಾಜು ಮಾಡಬೇಕು. ವೃಂದ ಮತ್ತು ನೇಮಕಾತಿ ನಿಯಮಗಳನ್ನು ಪ್ರತಿ 03 ವರ್ಷಕ್ಕೊಮ್ಮೆ ತಿದ್ದುಪಡಿ ಮಾಡಬೇಕು. ಇಲಾಖೆಯ ಎಲ್ಲಾ ವೃಂದಗಳ ಜೇಷ್ಠತಾ ಪಟ್ಟಿಯನ್ನು ಕಾಲ ಕಾಲಕ್ಕೆ ಪ್ರಕಟಿಸಬೇಕು. ಇಲಾಖೆಯ ಎಲ್ಲಾ ವೃಂದದ ಯಾವುದೇ ಅಧಿಕಾರಿ–ನೌಕರರಿಗೆ ಕಳೆದ 05 ವರ್ಷಗಳಿಂದ ಮುಂಬಡ್ತಿಗಳನ್ನು ನೀಡಿರುವುದಿಲ್ಲ. ಕೂಡಲೇ ಮುಂಬಡ್ತಿಗಳನ್ನು ನೀಡಬೇಕು.

ನಿಯಮಗಳಲ್ಲಿದ್ದಂತೆ ಸೇವಾನಿರತ ವೈದ್ಯರು, ಅಧಿಕಾರಿ–ನೌಕರರ ಉನ್ನತ ವ್ಯಾಸಂಗ/ಸ್ನಾತಕೋತ್ತರ ವ್ಯಾಸಂಗಕ್ಕೆ ಅವಕಾಶ ನೀಡಬೇಕು. ಇಲಾಖೆಯ ವರ್ಗಾವಣೆ ಕಾಯ್ದೆಯಲ್ಲಿನ ನ್ಯೂನತೆಗಳನ್ನು ಸರಿಪಡಿಸದೇ ಅವೈಜ್ಞಾನಿಕವಾಗಿ ಕೌನ್ಸಿಲಿಂಗ್ ವರ್ಗಾವಣೆ ಮಾಡುತ್ತಿರುವುದನ್ನು ಸರಿಪಡಿಸಬೇಕು. ವೈದ್ಯಕೀಯ ಶಿಕ್ಷಣ ಇಲಾಖೆಯ ಸ್ವಾಯತ್ತ ಸಂಸ್ಥೆಗಳಲ್ಲಿ ಹಾಗೂ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ಮಹಾನಗರ ಪಾಲಿಕೆ ಹಾಗೂ ನಗರ ಪಾಲಿಕೆಗಳಲ್ಲಿ ಮಂಜೂರಾಗಿರುವ ಆರೋಗ್ಯ ಇಲಾಖೆಯ ಎನ್–ಕೇಡರ್ ಹುದ್ದೆಗಳಿಗೆ ನೇಮಕಾತಿ, ಮುಂಬಡ್ತಿ ಮತ್ತು ವರ್ಗಾವಣೆಗಳಿಗೆ ಆರೋಗ್ಯ ಇಲಾಖೆಯ ವೈದ್ಯರು, ಅಧಿಕಾರಿ–ನೌಕರರನ್ನೇ ನಿಯೋಜಿಸಬೇಕು.

ಸಾರ್ವಜನಿಕರಿಗೆ ಉತ್ತಮ ಸೇವೆ ನೀಡುವ ದೃಷ್ಟಿಯಿಂದ ಇಲಾಖೆಯಲ್ಲಿ ಖಾಲಿ ಇರುವ ವೈದ್ಯರು, ಅರೆ ವೈದ್ಯಕೀಯ ಹಾಗೂ ಇತರೆ ವೃಂದದ ಹುದ್ದೆಗಳನ್ನು ಭರ್ತಿ ಮಾಡಬೇಕು. ಗುತ್ತಿಗೆ ವೈದ್ಯರು–ನೌಕರರು ಹಾಗೂ ಎನ್.ಹೆಚ್.ಎಂ. ಗುತ್ತಿಗೆ ನೌಕರರಿಗೆ ಸೇವಾ ಭದ್ರತೆ ಹಾಗೂ



ಕಾಲ ಕಾಲಕ್ಕೆ ಸೂಕ್ತ ವೇತನ ಹೆಚ್ಚಳ ಮಾಡಬೇಕು. ಇಲಾಖೆಯಲ್ಲಿಕೇಂದ್ರ ಪುರಸ್ಕೃತ ಯೋಜನೆ ಅಡಿ ಕಾರ್ಯನಿರತ ಸುಮಾರು 6000 ಅಧಿಕಾರಿ–ನೌಕರರಿಗೆ ಹಲವಾರು ವರ್ಷಗಳಿಂದ 3–4 ತಿಂಗಳಿಗೊಮ್ಮೆ ವೇತನ ಭತ್ಯೆಗಳನ್ನು ನೀಡುತ್ತಿದ್ದು, ಪ್ರತಿ ತಿಂಗಳ ಮೊದಲ ವಾರದಲ್ಲಿ ವೇತನ ಭತ್ಯೆಗಳನ್ನು ನೀಡಬೇಕು. ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವೈದ್ಯರು, ತಜ್ಞವೈದ್ಯರು ಇತರೆ ಸಿಬ್ಬಂದಿಯವರಿಗೆ ಸಿ.ಜಿ.ಹೆಚ್.ಎಸ್/ ಎ.ಐ.ಸಿ.ಟಿ.ಇ (ವೈದ್ಯಕೀಯ ಶಿಕ್ಷಣ ಮಾದರಿ) ವೇತನ ನೀಡಬೇಕು. ಸರ್ಕಾರಿ ವೈದ್ಯರುಗಳು ಕರ್ತವ್ಯದಅವಧಿಯ ನಂತರ ಖಾಸಗಿ ಸೇವೆಗೆ ಈ ಹಿಂದಿನಂತೆ ಅವಕಾಶ ನೀಡಬೇಕು.

ಅಲ್ಲದೆ ವೈದ್ಯಕೀಯ ಸೇವೆಯು ಅತ್ಯಂತ ಮಹತ್ವದ ಸೇವೆಯಾಗಿದ್ದು, ಈ ಸೇವೆಯು ಸಾರ್ವಜನಿಕರಿಗೆ ಸದಾ ಲಭ್ಯವಾಗುವಂತೆ 1986ರ ಆದೇಶದನ್ವಯ ಸರ್ಕಾರಿ ವೈದ್ಯರು ಖಾಸಗಿ ಸೇವೆಯನ್ನು ಕರ್ತವ್ಯ ಅವಧಿಯ ನಂತರ ಇಲ್ಲಿಯವರೆಗೆ ನಡೆಸುತ್ತಿದ್ದಾರೆ. ಆದರೆ ಪ್ರಸ್ತುತ ಸರ್ಕಾರಿ ವೈದ್ಯರುಗಳು ಒಳರೋಗಿ ಸೇವೆಯನ್ನು ನೀಡಬಾರದು ಎಂದು ನಿರ್ಭಂದಿಸಲಾಗಿದೆ. ಈ ನಿರ್ಬಂಧವನ್ನು ಹಿಂಪಡೆಯಬೇಕೆಂದು ಸಂಘದ ವತಿಯಿಂದ ಆಗ್ರಹಿಸಲಾಯಿತು.

ಬೇಡಿಕೆಗಳನ್ನು ನಿಗದಿತ ದಿನಾಂಕದಲ್ಲಿ ಈಡೇರಿಸದಿದ್ದಲ್ಲಿ ಇಲಾಖೆಯ ಎಲ್ಲಾ ವೃಂದ ಸಂಘಗಳ ಸಹಯೋಗದಿಂದ ಅನಿವಾರ್ಯವಾಗಿ ದಿನಾಂಕ: 11/03/2026 ರಿಂದ ಅನಿರ್ದಿಷ್ಟಾವಧಿ ಮುಷ್ಕರವನ್ನು ಹಮ್ಮಿಕೊಳ್ಳಲು ದಿನಾಂಕ: 13/02/2026ರಂದು ನಡೆದ ಸಂಘದ ಕಾರ್ಯಕಾರಿ ಸಮಿತಿ ಸಭೆಯಲ್ಲಿ ಸರ್ವಾನುಮತದ ನಿರ್ಣಯವನ್ನು ಕೈಗೊಳ್ಳಲಾಗಿದೆ. ಇದೇ ಸಂಧರ್ಭದಲ್ಲಿ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರಾ, ಕರ್ನಾಟಕ ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷರಾದ ಡಾ.ಗಣೇಶ ಕೆ.,

ಪ್ರಾಥಮಿಕ ಆರೋಗ್ಯ ಸಿರಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷರಾದ ಮಂಜುಳಾ, ಜಿಲ್ಲಾ ಆರೋಗ್ಯ ನಿರೀಕ್ಷಣಾಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷರಾದ ಸುರೇಶ ಭಂಡಾರಿ, ಅಧ್ಯಕ್ಷರು ಜಿಲ್ಲಾ ಶುಶ್ರೂಣಾಧಿಕಾರಿಗಳ ಸಂಘ, ಜಿಲ್ಲಾ ಫಾರ್ಮಸಿ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷರಾದ ಬಸವರಾಜ, ಜಿಲ್ಲಾ ಪ್ರಯೋಗಶಾಲಾ ತಾಂತ್ರೀಕ ಅಧಿಕಾರಿಗಳ ಸಂಘದ ಜಿಲ್ಲಾಧ್ಯಕ್ಷರಾದ ಅಡಿವೆಪ್ಪ, ಜಿಲ್ಲಾ ಲಿಪಿಕ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಶ್ರೀಧರ ಕುಲ್ಕರ್ಣಿ, ರಾಷ್ಟ್ರೀಯ ಆರೋಗ್ಯ ಅಭಿಯಾನ ಗುತ್ತಿಗೆ & ಹೊರಗುತ್ತಿಗೆ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಡಾ. ಅಶೋಕ ಹಾಗೂ ನೇತ್ರಾಧಿಕಾರಿಗಳ ಜಿಲ್ಲಾ ಸಂಘದ ಅಧ್ಯಕ್ಷರಾದ ಶೈಲೇಂದ್ರ ಸೇರಿದಂತೆ ವಿವಿಧ ಸಂಘದ ವಿವಿಧ ಪದಾಧಿಕಾರಿಗಳು ಇದ್ದರು.